ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 90 Saturday **26-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 90 ಶನಿವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಅನುದಾನದ ಕೊರತೆ: ವಿಬಿಜಿ ರಾಮ್ ಜಿ ಕೂಲಿ ಕೆಲಸಕ್ಕೆ ಕತ್ತರಿ?

ಜಗಳೂರಿನ 22 ಗ್ರಾಪಂಗಳ ಪೈಕಿ 20 ಕಡೆ ಕೆಲಸ ಸ್ಥಗಿತದ ಆತಂಕ

"ಮುಂಜಾನೆಯ ಮೆರಗು"

ಜಗಳೂರು, ಸೆ.25– ಗ್ರಾಮೀಣ ಪ್ರದೇಶದ ಜನರು ಉದ್ಯೋಗಕ್ಕಾಗಿ ನಗರ ಪ್ರದೇಶಗಳಿಗೆ ಗುಳೆ ಹೋಗುವುದನ್ನು ತಪ್ಪಿಸಿ, ಅವರಿರುವ ಗ್ರಾಮದಲ್ಲಿಯೇ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಜಾರಿಗೆ ಬಂದಿರುವ ಉದ್ಯೋಗ ಖಾತರಿ ಯೋಜನೆ ಇದೀಗ ಅನುದಾನದ ಕೊರತೆಯಿಂದಾಗಿ ಸಂಕಷ್ಟಕ್ಕೆ ಸಿಲುಕಿದೆ.

ಕೇಂದ್ರ ಸರ್ಕಾರದ ಮಹತ್ವದ ಗ್ರಾಮೀಣ ಉದ್ಯೋಗ ಯೋಜನೆಯ ಪರಿಷ್ಕೃತ ರೂಪವಾದ ವಿಬಿಜಿ ರಾಮ್ ಜಿ ಯೋಜನೆ ಅಡಿಯಲ್ಲಿ ಜಗಳೂರು ತಾಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ ಕೂಲಿ ಕೆಲಸ ನೀಡಲಾಗುತ್ತಿದ್ದು, ಇದೀಗ ಅನುದಾನದ ಕೊರತೆಯಿಂದಾಗಿ ಬಹುತೇಕ ಗ್ರಾಮ ಪಂಚಾಯಿತಿಗಳಲ್ಲಿ ಕೆಲಸ ಸ್ಥಗಿತಗೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ.

ತಾಲೂಕಿನಲ್ಲಿ ಒಟ್ಟು 22 ಗ್ರಾಮ ಪಂಚಾಯಿತಿಗಳಿದ್ದು, ಈ ಪೈಕಿ 20 ಗ್ರಾಮ ಪಂಚಾಯಿತಿಗಳಲ್ಲಿ ವಿಬಿಜಿ ರಾಮ್ ಜಿ ಯೋಜನೆಯಡಿ ಕೂಲಿ ಕೆಲಸ ಸ್ಥಗಿತಗೊಂಡಿದೆ ಎನ್ನಲಾಗಿದೆ. ಇದರಿಂದ ದಿನಗೂಲಿ ಕೆಲಸವನ್ನೇ ಅವಲಂಬಿಸಿರುವ ಗ್ರಾಮೀಣ ಭಾಗದ ಸಾವಿರಾರು ಕಾರ್ಮಿಕರಲ್ಲಿ ಆತಂಕ ಮೂಡಿದೆ.

ಬರದ ನಡುವೆ ಉದ್ಯೋಗವೇ ಆಸರೆ

ಜಗಳೂರು ತಾಲೂಕು ಬರ ಹಾಗೂ ಮಳೆ ಕೊರತೆಯ ಸಮಸ್ಯೆಯನ್ನು ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳ ಮೇಲೆ ಪರಿಣಾಮ ಬೀರಿದೆ. ರೈತರಿಗೆ ಕೃಷಿ ಕೆಲಸ ಕಡಿಮೆಯಾಗಿರುವ ಸಂದರ್ಭದಲ್ಲಿ



ಗ್ರಾಮೀಣ ಕೂಲಿ ಕಾರ್ಮಿಕರು ಉದ್ಯೋಗ ಖಾತರಿ ಯೋಜನೆಯನ್ನೇ ಪ್ರಮುಖ ಆಸರೆಯಾಗಿ ಅವಲಂಬಿಸಿದ್ದಾರೆ.

ಇಂತಹ ಸಂದರ್ಭದಲ್ಲಿ ಕೂಲಿ ಕೆಲಸವೂ ಸ್ಥಗಿತಗೊಂಡರೆ ಕುಟುಂಬ ನಿರ್ವಹಣೆ ಕಷ್ಟವಾಗಲಿದೆ ಎಂಬ ಆತಂಕ ಕಾರ್ಮಿಕರಲ್ಲಿ ವ್ಯಕ್ತವಾಗಿದೆ. ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳು ಉದ್ಯೋಗ ಖಾತರಿ ಯೋಜನೆಯಡಿ ಹೆಚ್ಚಿನ ಪ್ರಮಾಣದಲ್ಲಿ ಕೆಲಸಕ್ಕೆ ಬೇಡಿಕೆ ಸಲ್ಲಿಸುತ್ತಿವೆ.

ಲಕ್ಷಾಂತರ ಮಾನವ ದಿನಗಳ ಉದ್ಯೋಗ

ತಾಲೂಕಿನಲ್ಲಿ ಜುಲೈ 1ರಿಂದ ವಿಬಿಜಿ ರಾಮ್ ಜಿ ಯೋಜನೆಯಡಿ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಇಲ್ಲಿಯವರೆಗೆ ಸುಮಾರು ಎರಡು ಲಕ್ಷ ಮಾನವ ದಿನಗಳ ಉದ್ಯೋಗ ಕಲ್ಪಿಸಲಾಗಿದೆ ಎಂದು ಅಧಿಕಾರಿಗಳ ಅಂಕಿ–ಅಂಶಗಳು ತಿಳಿಸುತ್ತವೆ.

ಆಗಸ್ಟ್ ತಿಂಗಳಲ್ಲಿ ಮಾತ್ರ 1,43,193 ಮಾನವ ದಿನಗಳ ಕೆಲಸ ನೀಡಲಾಗಿದೆ. ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ಒಟ್ಟಾರೆ 3,97,616 ಮಾನವ ದಿನಗಳ ಉದ್ಯೋಗ ಕಲ್ಪಿಸಲಾಗಿದೆ ಎನ್ನಲಾಗಿದೆ.

ಗ್ರಾಮೀಣ ಪ್ರದೇಶದಲ್ಲಿ ಕೃಷಿ ಕೆಲಸದ ಕೊರತೆ ಇರುವ ಸಂದರ್ಭದಲ್ಲಿ ಇಷ್ಟೊಂದು ಪ್ರಮಾಣದಲ್ಲಿ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ದೊರೆತಿರುವುದು ಕಾರ್ಮಿಕರಿಗೆ ಆರ್ಥಿಕ ಆಸರೆಯಾಗಿದೆ.

ಅನುದಾನ ಬಿಡುಗಡೆಯೇ ಪ್ರಮುಖ ಸಮಸ್ಯೆ

ಪ್ರತಿ ಗ್ರಾಮ ಪಂಚಾಯಿತಿಗೆ ಅನುಮೋದಿತ ಕ್ರಿಯಾ ಯೋಜನೆಗೆ ಅನುಗುಣವಾಗಿ ಅನುದಾನ ಬಿಡುಗಡೆಯಾಗಬೇಕಿದೆ. ಆದರೆ ಅನುದಾನ ಕೊರತೆಯಿಂದಾಗಿ ಹಲವು ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ಕೈಗೆತ್ತಿಕೊಂಡಿದ್ದ ಕಾಮಗಾರಿಗಳಿಗೆ ನಿರಂತರವಾಗಿ ಕೂಲಿ ನೀಡುವುದು ಕಷ್ಟಕರವಾಗಿದೆ.

ಅನುದಾನವಿಲ್ಲದ ಗ್ರಾಮ ಪಂಚಾಯಿತಿಗಳಲ್ಲಿ ಕೆಲಸ ಮುಂದುವರಿಸಲು, ಅನುದಾನ ಲಭ್ಯವಿರುವ ಗ್ರಾಮ ಪಂಚಾಯಿತಿಗಳಿಂದ ಹಣ ವರ್ಗಾವಣೆ ಮಾಡಿ ಕೂಲಿ ಕೆಲಸ ಮುಂದುವರಿಸುವ ಪ್ರಯತ್ನ ಮಾಡಲಾಗುತ್ತಿದೆ. ಆದರೆ ಇದು ಎಲ್ಲ ಗ್ರಾಮ ಪಂಚಾಯಿತಿಗಳಲ್ಲೂ ನಿರಂತರವಾಗಿ ಕೆಲಸ ಒದಗಿಸಲು ಸಾಕಾಗುತ್ತಿಲ್ಲ ಎನ್ನುವುದು ಕಾರ್ಮಿಕರ ಅಳಲು.

ಕೂಲಿ ಪಾವತಿ ವಿಳಂಬವೂ ತಲೆನೋವು

ಹಿಂದೆ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಮಾಡಿದ ಕೂಲಿ ಕಾರ್ಮಿಕರ ಖಾತೆಗಳಿಗೆ ನೇರವಾಗಿ ಕೂಲಿ ಹಣ ಜಮೆಯಾಗುತ್ತಿತ್ತು. ಪರಿಷ್ಕೃತ ವ್ಯವಸ್ಥೆಯಲ್ಲಿ ಕೆಟಿಯು ಮೂಲಕ ಕೂಲಿ ಕಾರ್ಮಿಕರ ಬ್ಯಾಂಕ್ ಖಾತೆಗಳಿಗೆ ಹಣ ಜಮೆಯಾಗುವ ಪ್ರಕ್ರಿಯೆ ಜಾರಿಯಲ್ಲಿದ್ದು, ಪಾವತಿ ವಿಳಂಬವಾಗುತ್ತಿರುವುದು ಕಾರ್ಮಿಕರಿಗೆ ಮತ್ತೊಂದು ಸಮಸ್ಯೆಯಾಗಿದೆ.

ಕೆಲಸ ಮಾಡಿದ ನಂತರವೂ ಕೂಲಿ ಹಣ ಸಮಯಕ್ಕೆ ಸರಿಯಾಗಿ ಕೈಗೆ ಸಿಗದಿರುವುದು ದಿನನಿತ್ಯದ ಖರ್ಚು, ಆಹಾರ, ಮಕ್ಕಳ ಶಿಕ್ಷಣ ಸೇರಿದಂತೆ ಕುಟುಂಬದ ಅಗತ್ಯಗಳನ್ನು ನಿರ್ವಹಿಸಲು ತೊಂದರೆಯಾಗುತ್ತಿದೆ ಎಂದು ಕಾರ್ಮಿಕರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

'ಕೆಲಸ ಬೇಕು, ಭರವಸೆ ಬೇಡ'

ಮಳೆ ಕೈಕೊಟ್ಟಿರುವ ಸಂದರ್ಭದಲ್ಲಿ ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ಖಾತರಿ ಯೋಜನೆಯೇ ಪ್ರಮುಖ ಆದಾಯದ ಮೂಲವಾಗಿದೆ. ಕೃಷಿ ಕೆಲಸವಿಲ್ಲದ ಸಂದರ್ಭದಲ್ಲಿ ಸರ್ಕಾರದ



"ಬರಗಾಲದಲ್ಲಿ ಗ್ರಾಮೀಣ ಜನರಿಗೆ ಕೂಲಿ ಕೆಲಸದ ಅವಶ್ಯಕತೆ ಅತ್ಯಧಿಕವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಸ್ಥಗಿತವಾಗದಂತೆ ಅಧಿಕಾರಿಗಳು ಗಮನಹರಿಸಬೇಕು. ಅನುದಾನದ ಕೊರತೆಯಿರುವ ಗ್ರಾಮ ಪಂಚಾಯಿತಿಗಳಿಗೆ ತಕ್ಷಣ ಅನುದಾನ ಬಿಡುಗಡೆ ಮಾಡಿ, ಕೂಲಿ ಕಾರ್ಮಿಕರಿಗೆ ನಿರಂತರವಾಗಿ ಕೆಲಸ ಹಾಗೂ ಸಮಯಕ್ಕೆ ಸರಿಯಾಗಿ ಕೂಲಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು."

---- ರಾಘವೇಂದ್ರ, ಸಾಮಾಜಿಕ ಹೋರಾಟಗಾರ

ಯೋಜನೆಯಡಿ ಕನಿಷ್ಠ ಕೂಲಿ ಕೆಲಸ ದೊರೆತರೆ ಕುಟುಂಬ ನಿರ್ವಹಣೆ ಸಾಧ್ಯವಾಗುತ್ತದೆ ಎಂಬ ನಿರೀಕ್ಷೆಯಲ್ಲಿ ಕಾರ್ಮಿಕರು ಇದ್ದಾರೆ.

ಆದರೆ ಇದೀಗ ಅನುದಾನದ ಕೊರತೆಯಿಂದ ಕೆಲಸವೇ ಸ್ಥಗಿತಗೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿರುವುದು ಕಾರ್ಮಿಕರ ಆತಂಕಕ್ಕೆ ಕಾರಣವಾಗಿದೆ. ಬರದ ಸಂದರ್ಭದಲ್ಲಿ ಉದ್ಯೋಗದ ಬೇಡಿಕೆ ಹೆಚ್ಚಿರುವಾಗಲೇ ಯೋಜನೆಯಡಿ ಕೆಲಸದ ಅವಕಾಶ ಕಡಿಮೆಯಾಗುತ್ತಿರುವುದು ಗ್ರಾಮೀಣ ಆರ್ಥಿಕತೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.


ಅಧಿಕಾರಿಗಳು ತಕ್ಷಣ ಗಮನಹರಿಸಬೇಕು

ಬರಗಾಲದಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಕೂಲಿ ಕೆಲಸದ ಅವಶ್ಯಕತೆ ಹೆಚ್ಚಿರುತ್ತದೆ. ಹೀಗಾಗಿ ಅನುದಾನದ ಕೊರತೆಯಿಂದ ಯಾವುದೇ ಗ್ರಾಮ ಪಂಚಾಯಿತಿಯಲ್ಲೂ ಉದ್ಯೋಗ ಖಾತರಿ ಕಾಮಗಾರಿಗಳು ಸ್ಥಗಿತಗೊಳ್ಳದಂತೆ ಸರ್ಕಾರ ಹಾಗೂ ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಬಾಕಿ ಇರುವ ಕೂಲಿ ಹಣವನ್ನು ಶೀಘ್ರವಾಗಿ ಪಾವತಿಸುವುದರ ಜತೆಗೆ, ಕೆಲಸಕ್ಕಾಗಿ ಬೇಡಿಕೆ ಸಲ್ಲಿಸಿರುವ ಪ್ರತಿಯೊಬ್ಬ ಅರ್ಹ ಕಾರ್ಮಿಕನಿಗೂ ಸಮರ್ಪಕ ಉದ್ಯೋಗ ಕಲ್ಪಿಸಬೇಕು ಎಂಬ ಒತ್ತಾಯ ಕೇಳಿಬರುತ್ತಿದೆ.

ಇಂದು ಪಟ್ಟಣದ ಬಾಲ್ಯ ಗಣೇಶ ವಿಸರ್ಜನೆಗೆ ಸಜ್ಜಾದ ಜಗಳೂರು

"ಮುಂಜಾನೆಯ ಮೆರಗು"

ಜಗಳೂರು ಸೆ, 25– ಪಟ್ಟಣದ ತುಮಟಿ ಲೇಔಟ್‌ನಲ್ಲಿ ಪ್ರತಿಷ್ಠಾಪಿಸಲಾಗಿರುವ ಬಾಲ್ಯ ಗಣೇಶ ಮೂರ್ತಿಯ ವಿಸರ್ಜನಾ ಕಾರ್ಯಕ್ರಮ ಶನಿವಾರ ವಿಜೃಂಭಣೆಯಿಂದ ನಡೆಯಲಿದ್ದು, ಇದಕ್ಕಾಗಿ ಪಟ್ಟಣ ಸಜ್ಜುಗೊಂಡಿದೆ.



ಬಾಲ್ಯ ಗಣೇಶೋತ್ಸವದ ಅಂಗವಾಗಿ ತುಮಟಿ ಲೇಔಟ್‌ನಲ್ಲಿ ವಿಶೇಷವಾಗಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿದ್ದು, ಹಲವು ದಿನಗಳಿಂದ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಶನಿವಾರ ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆ ನಡೆಯಲಿದ್ದು, ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ವಿಸರ್ಜನಾ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಹಳೆ ಗಾಂಧಿ ವೃತ್ತದವರೆಗೆ ಪ್ರಮುಖ ರಸ್ತೆಗಳು ಕೇಸರಿಮಯವಾಗಿವೆ. ರಸ್ತೆಯುದ್ದಕ್ಕೂ ಗಣೇಶನ ಚಿತ್ರವಿರುವ ಕೇಸರಿ ಧ್ವಜಗಳನ್ನು ಕಟ್ಟಲಾಗಿದ್ದು, ಹಬ್ಬದ ಸಂಭ್ರಮ ಮನೆಮಾಡಿದೆ.

ವಿಸರ್ಜನಾ ಮೆರವಣಿಗೆ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಕಾರ್ಯಕ್ರಮ ಶಾಂತಿಯುತವಾಗಿ ನಡೆಯಲು ಆಯೋಜಕರು ಹಾಗೂ ಸಾರ್ವಜನಿಕರು ಸಹಕರಿಸುವಂತೆ ಮನವಿ ಮಾಡಲಾಗಿದೆ.

ಗ್ರಾಮೀಣ ಸಂಪರ್ಕದ ಜೀವನಾಡಿಗೆ ಜೀರ್ಣೋದ್ಧಾರ ಬೇಕು

ಅಣಬೂರು–ಕಾನನಕಟ್ಟೆ ರಸ್ತೆ ಅಭಿವೃದ್ಧಿಗೆ ಕೂಗು

"ಮುಂಜಾನೆಯ ಮೆರಗು"

ಜಗಳೂರು ಸೆ, 25– ತಾಲೂಕಿನ ಗಡಿ ಗ್ರಾಮವಾದ ಅಣಬೂರು ಗ್ರಾಮದಿಂದ ಕಾನನಕಟ್ಟೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ಹಲವು ವರ್ಷಗಳಿಂದ ಸಮರ್ಪಕ ನಿರ್ವಹಣೆ ಇಲ್ಲದೆ ಹದಗೆಟ್ಟಿದ್ದು, ಗ್ರಾಮಸ್ಥರು ಹಾಗೂ ಸಾರ್ವಜನಿಕರು ನಿತ್ಯ ಸಂಚಾರದ ವೇಳೆ ತೀವ್ರ ತೊಂದರೆ ಅನುಭವಿಸುವಂತಾಗಿದೆ.

ಅಣಬೂರು–ಕಾನನಕಟ್ಟೆ ನಡುವಿನ ರಸ್ತೆಯುದ್ದಕ್ಕೂ ಅಲ್ಲಲ್ಲಿ ದೊಡ್ಡದೊಡ್ಡ ಗುಂಡಿಗಳು ನಿರ್ಮಾಣವಾಗಿದ್ದು, ಬಹುತೇಕ ಕಡೆಗಳಲ್ಲಿ ಡಾಂಬರು ಕಿತ್ತುಹೋಗಿ ಜಲ್ಲಿ ಹಾಗೂ ಮಣ್ಣು ಹೊರಬಂದಿದೆ. ರಸ್ತೆಯ ಮೇಲ್ಮೈ ಸಮತಟ್ಟಾಗಿರದೆ ವಾಹನಗಳ ಸಂಚಾರಕ್ಕೆ ಅಡಚಣೆಯಾಗುತ್ತಿದೆ. ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಎಚ್ಚರಿಕೆಯಿಂದ ಸಂಚರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಸಂಪರ್ಕ ರಸ್ತೆಯನ್ನು ಅಣಬೂರು, ಕಾನನಕಟ್ಟೆ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರು ದೈನಂದಿನ ಕೆಲಸ, ಕೃಷಿ ಚಟುವಟಿಕೆ, ಶಾಲಾ–ಕಾಲೇಜು, ಮಾರುಕಟ್ಟೆ ಹಾಗೂ ಸರ್ಕಾರಿ ಕಚೇರಿ ಕೆಲಸಗಳಿಗೆ ಬಳಸುತ್ತಿದ್ದಾರೆ. ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಸಾಗಿಸಲು ಇದೇ ಮಾರ್ಗವನ್ನು ಅವಲಂಬಿಸಿರುವುದರಿಂದ ರಸ್ತೆ ಹದಗೆಟ್ಟಿರುವುದು ಗ್ರಾಮೀಣ ಜನರ ಬದುಕಿನ ಮೇಲೂ ಪರಿಣಾಮ ಬೀರುತ್ತಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಮಳೆ ಬಂದರೆ ಮತ್ತಷ್ಟು ಸಮಸ್ಯೆ

ಈಗಾಗಲೇ ರಸ್ತೆ ಗುಂಡಿಗಳಿಂದ ಕೂಡಿದ್ದು, ಮಳೆ ಬಂದ ಸಂದರ್ಭದಲ್ಲಿ ಗುಂಡಿಗಳಲ್ಲಿ ನೀರು ನಿಂತು ರಸ್ತೆ ಮತ್ತಷ್ಟು ಹಾಳಾಗುವ ಆತಂಕ ಎದುರಾಗಿದೆ. ಗುಂಡಿಗಳು ನೀರಿನಿಂದ ಮುಚ್ಚಿಕೊಳ್ಳುವುದರಿಂದ ಅವುಗಳ ಆಳ ತಿಳಿಯದೆ ವಾಹನ ಸವಾರರು ಅಪಾಯಕ್ಕೆ ಸಿಲುಕುವ ಸಾಧ್ಯತೆಯೂ ಇದೆ. ರಾತ್ರಿ ವೇಳೆ ಸಂಚಾರ ನಡೆಸುವವರಿಗೆ ಸಮಸ್ಯೆ ಮತ್ತಷ್ಟು ಗಂಭೀರವಾಗುತ್ತಿದೆ.

ರಸ್ತೆ ದುರಸ್ತಿಗಾಗಿ ಹಲವು ಬಾರಿ ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತಂದಿದ್ದರೂ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ತಾತ್ಕಾಲಿಕವಾಗಿ ಗುಂಡಿ ಮುಚ್ಚುವ ಬದಲು ರಸ್ತೆ ಸಂಪೂರ್ಣ ಪರಿಶೀಲಿಸಿ, ಅಗತ್ಯವಿರುವ ಕಡೆ ತಳಹದಿ ಬಲಪಡಿಸಿ ಗುಣಮಟ್ಟದ ಡಾಂಬರೀಕರಣ ಕಾಮಗಾರಿ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.



ಅಧಿಕಾರಿಗಳು ಸ್ಥಳ ಪರಿಶೀಲನೆಗೆ ಆಗ್ರಹ

ಅಣಬೂರು–ಕಾನನಕಟ್ಟೆ ಸಂಪರ್ಕ ರಸ್ತೆ ಗ್ರಾಮೀಣ ಪ್ರದೇಶದ ಪ್ರಮುಖ ಸಂಪರ್ಕ ಮಾರ್ಗವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ರಸ್ತೆಯ ಸ್ಥಿತಿಗತಿ ಪರಿಶೀಲಿಸಬೇಕು. ರಸ್ತೆ ಅಭಿವೃದ್ಧಿಗೆ ಅಗತ್ಯ ಅನುದಾನ ಮಂಜೂರು ಮಾಡಿ, ವೈಜ್ಞಾನಿಕ ರೀತಿಯಲ್ಲಿ ಕಾಮಗಾರಿ ಕೈಗೊಂಡು ದೀರ್ಘಕಾಲ ಬಾಳಿಕೆ ಬರುವಂತೆ ರಸ್ತೆ ನಿರ್ಮಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

"ರಸ್ತೆ ಹದಗೆಟ್ಟಿರುವುದರಿಂದ ಪ್ರತಿನಿತ್ಯ ಸಂಚಾರಕ್ಕೆ ತೊಂದರೆಯಾಗುತ್ತಿದೆ. ವಾಹನಗಳ ದುರಸ್ತಿ ವೆಚ್ಚವೂ ಹೆಚ್ಚಾಗುತ್ತಿದೆ. ಅಧಿಕಾರಿಗಳು ಇನ್ನಷ್ಟು ವಿಳಂಬ ಮಾಡದೆ ರಸ್ತೆ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕು" ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಜನರ ದೈನಂದಿನ ಸಂಚಾರ ಹಾಗೂ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಅಣಬೂರು–ಕಾನನಕಟ್ಟೆ ರಸ್ತೆಯನ್ನು ಶೀಘ್ರ ಅಭಿವೃದ್ಧಿಪಡಿಸಿ, ಗ್ರಾಮಸ್ಥರ ಬಹುದಿನಗಳ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕಾಗಿದೆ.

ಪ್ರಜಾ ಸೇವಾ ಆಂದೋಲನ: ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಲು ತಹಸೀಲ್ದಾರ್ ಮನವಿ

"ಮುಂಜಾನೆಯ ಮೆರಗು"

ಜಗಳೂರು, ಸೆ.25– ತಾಲೂಕಿನ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸುವ ಹಾಗೂ ವಿವಿಧ ಸರ್ಕಾರಿ ಯೋಜನೆಗಳ ಮಾಹಿತಿ ಮತ್ತು ಸೌಲಭ್ಯಗಳನ್ನು ಒಂದೇ ವೇದಿಕೆಯಲ್ಲಿ ಒದಗಿಸುವ ಉದ್ದೇಶದಿಂದ ಸೆ.26ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಹಸೀಲ್ದಾರ್ ಕುರುಬರ ಬಸವರಾಜ್ ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳುವುದರ ಜೊತೆಗೆ ವಿವಿಧ ಇಲಾಖೆಗಳ ಸರ್ಕಾರಿ ಯೋಜನೆಗಳ ಮಾಹಿತಿ ಪಡೆದುಕೊಂಡು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಆಗ್ನೇಯ ಪದವೀಧರ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ, ಕಾರ್ಯಕ್ರಮಕ್ಕೆ ಚುನಾಯಿತ ಜನಪ್ರತಿನಿಧಿಗಳು ಭಾಗವಹಿಸಲು ಅವಕಾಶ ಇರುವುದಿಲ್ಲ. ಹೀಗಾಗಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಯ ನೇತೃತ್ವದಲ್ಲಿ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ನಡೆಯಲಿದೆ ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳಿಗೆ ಸಂಬಂಧಿಸಿದ ದಾಖಲೆಗಳೊಂದಿಗೆ ಹಾಜರಾಗಿ, ಲಭ್ಯವಿರುವ ಸರ್ಕಾರಿ ಸೇವೆ ಮತ್ತು ಯೋಜನೆಗಳ ಮಾಹಿತಿಯನ್ನು ಪಡೆದುಕೊಳ್ಳುವಂತೆ ತಹಸೀಲ್ದಾರ್ ಮನವಿ ಮಾಡಿದ್ದಾರೆ.

ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ನಾಗಲಕ್ಷ್ಮೀ ಬಾಯಿ ಅವರಿಗೆ ಪಿತೃವಿಯೋಗ

ಬಿಳಿಚೋಡು ಪ್ರೌಢಶಾಲೆಯ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಕೆ.ಸಿ. ಗಿರಿಯ ನಾಯ್ಕ ನಿಧನ

"ಮುಂಜಾನೆಯ ಮೆರಗು"

ಜಗಳೂರು ಸೆ, 25– ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ನಾಗಲಕ್ಷ್ಮೀ ಬಾಯಿ ಅವರ ತಂದೆ ಹಾ

ಪೌರಕಾರ್ಮಿಕರಿಗೆ ಭರ್ಜರಿ ಗುಡ್ ನ್ಯೂಸ್ ಕೊಟ್ಟ ಸಿಎಂ ಡಿ.ಕೆ.ಶಿವಕುಮಾರ್

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.25– "ಶ್ರಮದಲ್ಲೇ ಶಿವನನ್ನು ಕಾಣುವ ನಿತ್ಯ ನೈರ್ಮಲ್ಯಗಾರರು ಪೌರ ಕಾರ್ಮಿಕರು. ಇವರು ನಿಜವಾದ ಕರ್ಮಯೋಗಿ, ಕಾಯಕಜೀವಿಗಳು, ಸ್ವಚ್ಛತೆ ಕ್ರಾಂತಿಯ ಸರದಾರರು. ಪೌರಕಾರ್ಮಿಕರ ಭತ್ಯೆ ಏರಿಕೆ, ಉಪಹಾರ ಭತ್ಯೆಯನ್ನು 35ರಿಂದ 70 ರೂ.ಗೆ ಏರಿಕೆ ಮಾಡಿ ಸಧ್ಯದಲ್ಲೇ ಆದೇಶ ಹೋರಡಿಸಲಾಗುವುದು" ಎಂದು ಸಿಎಂ ಡಿಕೆ ಶಿವಕುಮಾರ್ ಅವರು ಘೋಷಿಸಿದರು.

"ನಿಮ್ಮೆಲ್ಲರ ಬದುಕಿನಲ್ಲಿ ನೀವು ಯಾವತ್ತಿಗೂ ಕೀಳರಿಮೆಯಿಂದ ಮಾನಸಿಕವಾಗಿ ಕುಗ್ಗಬಾರದು. ನೀವು ದೇಶಸೇವೆ ಮಾಡುತ್ತಿರುವುದಾಗಿ ಸ್ವಾಭಿಮಾನದಿಂದ ಬದುಕಿ. ಪೌರಕಾರ್ಮಿಕರಿಲ್ಲದೆ ನಾವು ಆರೋಗ್ಯವಾಗಿರಲು ಸಾಧ್ಯವಿಲ್ಲ. ನಮ್ಮ ಸರ್ಕಾರ ಬಂದ ನಂತರ ಏನೇ ಒತ್ತಡವಿದ್ದರೂ ಸಾವಿರಾರು ಜನ ಪೌರಕಾರ್ಮಿಕರನ್ನು ಖಾಯಂ ಮಾಡಿದ್ದು, ಉಳಿದವರನ್ನು ಖಾಯಂ ಮಾಡಲಾಗುವುದು. ಬಿಡ್ಲ್ಯೂಎಸ್ ಎಸ್ ಬಿ, ನೀರು ಸರಬರಾಜು ಇಲಾಖೆಗಳಲ್ಲಿ ಖಾಯಂ ಆಗಿ ಸ್ವಾಭಿಮಾನದ ಬದುಕು ನೀಡಲು ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ. ನೀವಿಲ್ಲ ಎಂದರೆ ಮಹಾನಗರ, ಪಟ್ಟಣಗಳು ಸ್ವಚ್ಛವಾಗಿರುವುದಿಲ್ಲ" ಎಂದು ಭರವಸೆ ನೀಡಿದರು.

"ನಿಮ್ಮ ಸಂಘಟನೆಯಲ್ಲಿ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಹೇಳುವಂತೆ ನಾನು ಬಸವಂತಪ್ಪನವರಿಗೆ ಹೇಳಿದೆ. ನಿಮ್ಮ ಅಧ್ಯಕ್ಷರುಗಳೇ ನಿಮ್ಮ ಕೆಲಸ ಖಾಯಂ ಮಾಡಲು ಅಡ್ಡಿಪಡಿಸುತ್ತಿದ್ದಾರೆ ಎಂಬ ಅಂಶವನ್ನು ನನ್ನ ಗಮನಕ್ಕೆ ತಂದರು. ಈ ವಿಚಾರವನ್ನು ಜನರ ಮುಂದೆಯೇ ಪ್ರಸ್ತಾಪಿಸಿ ಎಂದು ನಾನು ಸೂಚಿಸಿದೆ. ಕಾರಣ ನೀವು ಜಾಗೃತರಾಗಬೇಕು. ನಾನು ಇಲ್ಲಿಂದಲೇ ಅಧಿಕಾರಿಗಳಿಗೆ ಆದೇಶ ನೀಡುತ್ತಿದ್ದೇನೆ" ಎಂದು ಆತ್ಮಸ್ಥೈರ್ಯ ತುಂಬಿದರು.

ಪೌರ ಕಾರ್ಮಿಕರ ಬೇಡಿಕೆ ಈಡೇರಿಕೆಗೆ ಸಚಿವ ಸಂಪುಟ ಉಪ ಸಮಿತಿ ರಚನೆ

"ಇಂತಹ ಸಮಸ್ಯೆಗಳನ್ನು ಬಗೆಹರಿಸಬೇಕು ಎಂಬ ಕಾರಣಕ್ಕೆ ನಾವು ಪ್ರಜಾಸೇವೆ ಇಲಾಖೆ ಆರಂಭಿಸಿದ್ದೇವೆ. ಯಾವ ಸಂಘಟನೆಯ ಮಧ್ಯವರ್ತಿಗಳು ಅಗತ್ಯವಿಲ್ಲ. ನಿಮ್ಮ ಸಮಸ್ಯೆಗಳನ್ನು



ಬಾಲಕೃಷ್ಣ, ಯತೀಂದ್ರ, ಮುನಿಯಪ್ಪನವರು ಹಾಗೂ ಬಸವಂತಪ್ಪನವರು ತಿಳಿಸಿದ್ದಾರೆ. ನಿಮ್ಮ ಮಂಡಳಿ, ಯೋಗ ಕ್ಷೇಮ, ಕಲ್ಯಾಣ ನಿಧಿ ವಿಚಾರದಲ್ಲಿ ನಾನು ಗಮನಹರಿಸಬೇಕಾಗಿದ್ದು, ಇದಕ್ಕಾಗಿ ಸಮಾಜಕಲ್ಯಾಣ, ನಗರಾಭಿವೃದ್ಧಿ ಇಲಾಖೆ ಸೇರಿದಂತೆ ಬಸವಂತಪ್ಪನವರನ್ನು ಒಳಗೊಂಡಂತೆ ಸಂಪುಟ ಉಪಸಮಿತಿ ರಚಿಸಿ, ಆರ್ಥಿಕ ಇಲಾಖೆ ವಿಶ್ವಾಸ ಪಡೆದು ತೀರ್ಮಾನ ಮಾಡಲಾಗುವುದು" ಎಂದು ಹೇಳಿದರು.

"ಪ್ರತಿನಿತ್ಯ ನಿಮಗೆ ನೀಡುವ ಜವಾಬ್ದಾರಿಯಲ್ಲಿ 60% ಜನ ಪ್ರಾಮಾಣಿಕವಾಗಿ ಮಾಡುತ್ತೀರಿ. ಉಳಿದಷ್ಟು ಜನ ಮೈಗಳ್ಳರು, ಮಹಿಳೆಯರ ಮೇಲೆ ದರ್ಪ ತೋರುವವರು ನಿಮ್ಮಲ್ಲೇ ಇದ್ದಾರೆ. ಇದರ ಬಗ್ಗೆ ಗಮನದಲ್ಲಿಟ್ಟುಕೊಂಡು ಕ್ರಮ ಕೈಗೊಳ್ಳಲಾಗುವುದು. ನೀವುಗಳು ಇಲ್ಲದಿದ್ದರೆ ನಗರ ತಿಪ್ಪೆಗುಂಡಿಯಾಗುತ್ತದೆ ಎಂಬ ಅರಿವಿದೆ. ನೀವಿದ್ದರೆ ರಸ್ತೆ, ನಗರ ಎಲ್ಲವೂ ಸುಂದರ. ಹೀಗಾಗಿ ನಿಮ್ಮನ್ನು ಸ್ವಚ್ಛತೆಯ ರಾಯಭಾರಿಗಳು ಎಂದು ಗೌರವಯುತವಾಗಿ ಕಾಣುತ್ತಿದೆ. ನಿಮ್ಮ ಆರೋಗ್ಯಕ್ಕೆ ಗ್ಯಾರಂಟಿ ನೀಡುವುದು ನಮ್ಮ ಬದ್ಧತೆಯಾಗಿದೆ. ಸಮಾಜ ನಿಮ್ಮ ಮೇಲೆ ಅವಲಂಬಿತವಾಗಿದೆ. ನಿಮ್ಮ ಕೆಲಸ ದೇವರ ಸೇವೆಗೆ ಸಮಾನ ಎಂದು ಅಧಿಕಾರಿಗಳು ಹಾಗೂ ಸಾಮಾನ್ಯ ಜನ ಕಾಣುವಂತಾಗಬೇಕು" ಎಂದು ತಿಳಿಸಿದರು.

ಸರ್ವರಿಗೂ ಸಮಬಾಳು, ಸಮ ಪಾಲು ಎಂಬ ತತ್ವ ಪಾಲನೆ

"ಇಡೀ ದೇಶಕ್ಕೆ ನಮ್ಮ ಸರ್ಕಾರ ಹೊಸ ಸಂದೇಶ ನೀಡಿದೆ. ನಿಮ್ಮ ಪೌರಕಾರ್ಮಿಕನ ಮಗನನ್ನು ಭಗವಂತನ ಸೇವೆ ಮಾಡುವ ಮುಜರಾಯಿ ಇಲಾಖೆ ಸಚಿವರನ್ನಾಗಿ ಮಾಡಿ. ಸರ್ವರಿಗೂ ಸಮಬಾಳು, ಸಮ ಪಾಲು ಎಂಬ ತತ್ವವನ್ನು ಪಾಲಿಸಿದ್ದೇವೆ. ಒಂದು ಕಾಲದಲ್ಲಿ ದೇವಾಲಯದ ಒಳಗೆ ನಿರ್ಬಂಧ ಹೇರಲಾಗಿತ್ತು. ಅಂತಹ ತಾರತಮ್ಯ ನಿಲ್ಲಬೇಕು ಎಂದು ನಾನು ಪೌರ ಕಾರ್ಮಿಕನ ಮಗನಿಗೆ ಈ ಇಲಾಖೆ ಜವಾಬ್ದಾರಿ ನೀಡಲಾಗಿದೆ. ಅವರಿಗೆ ಗೌರವ ಹಾಗೂ ಶಕ್ತಿ ಬರಬೇಕು ಎಂದು ಮೀನುಗಾರಿಕೆ, ಬಂದರು ಸಚಿವಾಲಯವನ್ನು ನೀಡಲಾಗಿದೆ" ಎಂದರು.

ಕಾಂಗ್ರೆಸ್ ಸರ್ಕಾರ ಹಾಗೂ ಪೌರ ಕಾರ್ಮಿಕರ ನಡುವೆ ಭಕ್ತ-ಭಗವಂತನ ಸಂಬಂಧ

"ನಿಮ್ಮ ಕೈಗೆ ಭದ್ರತೆ ನೀಡಬೇಕು ಎಂಬು. 2017ರಲ್ಲಿ ನಮ್ಮ ಸರ್ಕಾರ 10 ಸಾವಿರ ಪೌರ ಕಾರ್ಮಿಕರನ್ನು ನೇಮಕ ಮಾಡಲಾಗಿತ್ತು. 2023ರಲ್ಲಿ ಸಿದ್ದರಾಮಯ್ಯ ಅವರ ಸರ್ಕಾರ ಅಧಿಕಾರಕ್ಕೆ ಬಂದ ನಂತರ 12,609 ಪೌರ ಕಾರ್ಮಿಕರನ್ನು ಖಾಯಂ ಮಾಡಿ ಇತಿಹಾಸವನ್ನು ನಿರ್ಮಿಸಿದೆ. ಒಂದು ರೂಪಾಯಿ ಭ್ರಷ್ಟಾಚಾರವಿಲ್ಲದೆ ಸರ್ಕಾರಿ ಕೆಲಸ ನೀಡಿದ್ದೇವೆ. ನಿಮಗೆ 40 ಸಾವಿರ ವೇತನ ನೀಡುವಂತೆ ಆದೇಶ ಮಾಡಿದೆವು. ಸ್ಥಳೀಯ ಸಂಸ್ಥೆಗಳಲ್ಲಿ 6 ಸಾವಿರ ಜನರನ್ನು ನೇಮಕ ಮಾಡಲಾಗಿದೆ. ಇನ್ನಷ್ಟು ನೇಮಕಾತಿ ಮಾಡಬೇಕು ಎಂದು ಚರ್ಚೆ ಮಾಡಿದ್ದೇವೆ" ಎಂದು ತಿಳಿಸಿದರು.

"ದೇವರಾಜ ಅರಸು ಅವರ ಕಾಲದಿಂದ ಪೌರ ಕಾರ್ಮಿಕರ ಬಗ್ಗೆ ಸರ್ಕಾರ ಚಿಂತನೆ ನಡೆಸಿದ್ದರೆ ಅದು ಕಾಂಗ್ರೆಸ್ ಸರ್ಕಾರ. ಪೌರ ಕಾರ್ಮಿಕರು ಹಾಗೂ ಸರ್ಕಾರದ ನಡುವೆ ಇರುವುದು ಭಕ್ತ ಹಾಗೂ ಭಗವಂತ ನಡುವಣ ಸಂಬಂಧ. ನಿಮ್ಮ ಮನೆ ನಿರ್ಮಾಣಕ್ಕೆ 7.50 ಲಕ್ಷ ನೀಡಲು ತೀರ್ಮಾನಿಸಿದ್ದೇವೆ" ಎಂದರು.

ತಮಿಳುನಾಡಿಗೆ ನೀರು ಬಿಡುವ ಆದೇಶ ಒಪ್ಪಲು ಸಾಧ್ಯವಿಲ್ಲ : ಸಚಿವ ಚಲುವರಾಯಸ್ವಾಮಿ

"ಮುಂಜಾನೆಯ ಮೆರಗು"

ಬೆಂಗಳೂರು,ಸೆ.25– ತಮಿಳುನಾಡಿಗೆ ಪ್ರತಿದಿನ 4 ಸಾವಿರ ಕ್ಯೂಸೆಕ್ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶವನ್ನು ಕರ್ನಾಟಕ ಒಪ್ಪಲು ಸಾಧ್ಯವಿಲ್ಲ ಎಂದು ಜಲ ಸಂಪನೂಲ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಸಿಡಬ್ಲ್ಯೂಆರ್‌ಸಿಯ ಆದೇಶವನ್ನು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಕೂಡ ಎತ್ತಿಹಿಡಿದಿರುವ ಹಿನ್ನೆಲೆಯಲ್ಲಿ, ರಾಜ್ಯದ ಜಲಾಶಯಗಳಲ್ಲಿನ ಪ್ರಸ್ತುತ ನೀರಿನ ಲಭ್ಯತೆ ಮತ್ತು ಮಳೆಯ ಕೊರತೆಯನ್ನು ಪರಿಗಣಿಸಬೇಕಾಗಿದೆ ಎಂದು ಸಚಿವರು ಒತ್ತಾಯಿಸಿದರು.

ಕೆಆರ್‌ಎಸ್, ಕಬಿನಿ, ಹೇಮಾವತಿ ಮತ್ತು ಹಾರಂಗಿ ಜಲಾಶಯಗಳಲ್ಲಿ ನೀರಿನ ಸಂಗ್ರಹ ತೀವ್ರವಾಗಿ ಕುಸಿದಿದ್ದು, ಒಳಹರಿವು ಕೂಡ ಕಡಿಮೆಯಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕದ ವಾಸ್ತವ



ಪರಿಸ್ಥಿತಿಯನ್ನು ಅಂಕಿ-ಅಂಶಗಳೊಂದಿಗೆ ಪ್ರಾಧಿಕಾರದ ಮುಂದೆ ವಾದ ಮಂಡಿಸಿ, 4 ಸಾವಿರ ಕ್ಯೂಸೆಕ್ ಬದಲಿಗೆ 3 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಮನವಿ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಕರ್ನಾಟಕದ ನಾಲ್ಕು ಪ್ರಮುಖ ಜಲಾಶಯಗಳಲ್ಲಿ ಒಟ್ಟು 49.775 ಟಿಎಂಸಿ (47.60%) ನೀರು ಮಾತ್ರ ಲಭ್ಯವಿದೆ. ಇದರಲ್ಲಿ ಕುಡಿಯುವ ನೀರಿಗೆ 29 ಟಿಎಂಸಿ, ಪರಿಸರ ಹರಿವಿಗೆ 10 ಟಿಎಂಸಿ ಹಾಗೂ ಮುಂಗಾರು ಬೆಳೆಗೆ 23.40 ಟಿಎಂಸಿ ಅಗತ್ಯವಿದೆ ಎಂದು ರಾಜ್ಯದ ಪ್ರತಿನಿಧಿಗಳು ಸಭೆಯಲ್ಲಿ ವಿವರಿಸಿದ್ದಾರೆ.

ಜೂ.1ರಿಂದ ಸೆ.22ರವರೆಗೆ ರಾಜ್ಯದಲ್ಲಿ 406.5 ಮಿ.ಮೀ. ಮಳೆಯಾಗಿದ್ದು, ಸಾಮಾನ್ಯ 643.4 ಮಿ.ಮೀ.ಗೆ ಹೋಲಿಸಿದರೆ ಶೇ.63.18ರಷ್ಟು ಮಳೆಯಾಗಿದೆ. ಜಲಾಶಯಗಳಿಗೆ ಒಳಹರಿವು ಕೇವಲ 2,200 ಕ್ಯೂಸೆಕ್‌ಗೆ ಇಳಿದಿದೆ. ಕಾವೇರಿ ಜಲಾನಯನ ಪ್ರದೇಶದ ಶೇ.71ರಷ್ಟು ತಾಲ್ಲೂಕುಗಳು ಬರಪೀಡಿತವಾಗಿದ್ದು, ಇದು ರಾಜ್ಯದ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ಕರ್ನಾಟಕ ವಾದಿಸಿದೆ.

ಇದೇ ವೇಳೆ, ಜು.29ರಿಂದ ಸೆ.23ರವರೆಗೆ ಬಿಳಿಗುಂಡ್ಲುವಿನಲ್ಲಿ ಸಿಡಬ್ಲ್ಯೂಎಂಎ ನಿಗದಿಪಡಿಸಿದ್ದ 4,21,500 ಕ್ಯೂಸೆಕ್ ಬದಲಿಗೆ 4,47,182 ಕ್ಯೂಸೆಕ್ (38.637 ಟಿಎಂಸಿ) ನೀರು ಹರಿಸಲಾಗಿದೆ. ಇದರಿಂದ ನಿಗದಿಗಿಂತ 25,682 ಕ್ಯೂಸೆಕ್ (2.219 ಟಿಎಂಸಿ) ಹೆಚ್ಚುವರಿ ನೀರು ಹರಿಸಲಾಗಿದೆ ಎಂಬುದು ಕರ್ನಾಟಕದ ಮತ್ತೊಂದು ವಾದವಾಗಿದೆ.

ಕಾವೇರಿ ಕೊಳ್ಳದ ಬೆಂಗಳೂರು ಸೇರಿದಂತೆ ಪಟ್ಟಣಗಳು ಮತ್ತು ಗ್ರಾಮಗಳ ಕುಡಿಯುವ ನೀರಿನ ಅಗತ್ಯಕ್ಕೆ ಮೊದಲ ಆದ್ಯತೆ ನೀಡಬೇಕಾಗಿದೆ. ಈಗ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿಸಿದರೆ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ಚಲುವರಾಯಸ್ವಾಮಿ ಹೇಳಿದರು.

ಸೂಪರ್ ಎಲ್ ನಿನೊ ಪರಿಣಾಮ, ಮಳೆಯ ಕೊರತೆ ಹಾಗೂ ಮುಂದಿನ ದಿನಗಳಲ್ಲಿ ಒಳಹರಿವು ಹೆಚ್ಚಾಗುವ ಸಾಧ್ಯತೆ ಕಡಿಮೆ ಇರುವುದನ್ನು ಪರಿಗಣಿಸಿ ನೀರು ಹರಿಸುವ ಪ್ರಮಾಣವನ್ನು 3 ಸಾವಿರ ಕ್ಯೂಸೆಕ್‌ಗೆ ಇಳಿಸಬೇಕು ಎಂದು ಕರ್ನಾಟಕ ಒತ್ತಾಯಿಸಿದೆ. ಮುಂದಿನ ಕಾನೂನು ಹೋರಾಟದ ರೂಪುರೇಷೆಯನ್ನು ರಾಜ್ಯದ ಕಾನೂನು ತಜ್ಞರು ಮತ್ತು ಅಡ್ವೊಕೇಟ್ ಜನರಲ್ ಅವರೊಂದಿಗೆ ಚರ್ಚಿಸಿ ಸಿದ್ಧಪಡಿಸಲಾಗುವುದು ಎಂದು ಸಚಿವರು ತಿಳಿಸಿದರು.

ಕೈದಿಗಳಿಂದ ತುಂಬಿ ತುಳುಕುತ್ತಿರುವ ಹಾಸನ ಜೈಲು
ಹೊಸ ಕಾರಾಗೃಹಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ

"ಮುಂಜಾನೆಯ ಮೆರಗು"

ಹಾಸನ, ಸೆ.25– 250 ಕೈದಿಗಳ ಸಾಮರ್ಥ್ಯ ಹೊಂದಿರುವ ಹಾಸನ ಜಿಲ್ಲಾ ಕಾರಾಗೃಹದಲ್ಲಿ ಪ್ರಸ್ತುತ 334 ಕೈದಿಗಳಿರುವ ಹಿನ್ನೆಲೆಯಲ್ಲಿ ಹೊಸ ಜೈಲು ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಡಿಜಿಪಿ ಅಲೋಕ್ ಕುಮಾರ್ ತಿಳಿಸಿದರು.



ಕಾರಾಗೃಹ ಪರಿಶೀಲನೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೈದಿಗಳ ಸಂಖ್ಯೆ ಹೆಚ್ಚಿರುವುದರಿಂದ ಓವರ್‌ಕ್ರೌಡಿಂಗ್ ಸಮಸ್ಯೆ ಎದುರಾಗಿದೆ. ಹೊಸ ಕಾರಾಗೃಹ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದ್ದು, ಅನುಮೋದನೆ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಪರಿಶೀಲನೆ ವೇಳೆ ಸ್ವಚ್ಛತೆ, ಕೈದಿಗಳ ಕೂದಲು ಕತ್ತರಿಸುವ ವ್ಯವಸ್ಥೆ ಹಾಗೂ ಆಹಾರದ ಗುಣಮಟ್ಟವನ್ನು ಪರಿಶೀಲಿಸಲಾಗಿದ್ದು, ನಿಗದಿತ ಮಾನದಂಡ ಪಾಲನೆಯಾಗುತ್ತಿದೆ ಎಂದು ಹೇಳಿದರು.

ಜೈಲಿನಲ್ಲಿ ಗಲಾಟೆ ಅಥವಾ ಅಶಿಸ್ತಿಗೆ ಕಾರಣವಾಗುವ ಕೈದಿಗಳನ್ನು ಬೇರೆ ಕಾರಾಗೃಹಗಳಿಗೆ ಸ್ಥಳಾಂತರಿಸಲಾಗುತ್ತಿದೆ. ಒಂದೇ ಪ್ರಕರಣದ ಆರೋಪಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಒಂದೇ ಜೈಲಿನಲ್ಲಿ ಇರಿಸದೆ ಬೇರೆಡೆಗೆ ಸ್ಥಳಾಂತರಿಸುವ ಕುರಿತು ಎಸ್‌ಪಿ ಹಾಗೂ ನ್ಯಾಯಾಂಗ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲಾಗುತ್ತಿದೆ ಎಂದರು.

ಅಕ್ರಮ ಮೊಬೈಲ್ ಬಳಕೆಗೆ ಕಡಿವಾಣ ಹಾಕಲು ನಿರಂತರ ತಪಾಸಣೆ ನಡೆಸಲಾಗುತ್ತಿದ್ದು, ಜೈಲಿನೊಳಗೆ ಹೊರಗಿನಿಂದ ಮೊಬೈಲ್ ಎಸೆಯುವ ಪ್ರಕರಣಗಳಿಗೂ ನಿಯಂತ್ರಣ ಹೇರಲಾಗಿದೆ. 2026ರಲ್ಲಿ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಹೊಸದಾಗಿ ಮೊಬೈಲ್‌ಗಳು ಜೈಲಿನೊಳಗೆ ಪ್ರವೇಶಿಸುವ ಪ್ರಮಾಣ ಕಡಿಮೆಯಾಗಿದೆ ಎಂದು ತಿಳಿಸಿದರು.

ಕೈದಿಗಳು ಕುಟುಂಬದವರೊಂದಿಗೆ ಕಾನೂನುಬದ್ಧವಾಗಿ ಸಂಪರ್ಕದಲ್ಲಿರಲು ಹಾಸನ ಸೇರಿದಂತೆ ರಾಜ್ಯದ 48 ಕಾರಾಗೃಹಗಳಲ್ಲಿ ಪ್ರಿಸನ್ ಕಾಲ್ ವ್ಯವಸ್ಥೆ ಕಲ್ಪಿಸಲಾಗಿದೆ. ಈ ವೇಳೆ ಎಸ್‌ಪಿ ಶುಭನ್ವಿತಾ, ಎಎಸ್ಪಿ ಶ್ರೀನಿಧಿ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮೇಲನೆಗೆ ಅಭ್ಯರ್ಥಿ ಆಯ್ಕೆ, ಸಂಪುಟ ವಿಸ್ತರಣೆ ಕುರಿತು ಸಿಎಂ ಡಿಕೆಶಿ-ಸುರ್ಜೇವಾಲ ಚರ್ಚೆ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.25– ಸಂಪುಟದಲ್ಲಿ ಖಾಲಿಯಿರುವ ಎರಡು ಸ್ಥಾನಗಳಿಗೆ ನೇಮಕಾತಿ, ವಿಧಾನ ಪರಿಷತ್ತಿನ ಐದು ಸ್ಥಾನಗಳಿಗೆ ನಾಮನಿರ್ದೇಶನ, ಸ್ಥಳೀಯ ಸಂಸ್ಥೆ ಹಾಗೂ ಮುಂದಿನ ವಿಧಾನಸಭೆ ಚುನಾವಣೆ ತಯಾರಿ ಸೇರಿದಂತೆ ಹಲವಾರು ವಿಚಾರಗಳ ಬಗ್ಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚೆ ನಡೆಸಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ನಿನ್ನೆ ನಡೆದ ಪ್ರಮುಖ ಸಭೆಯಲ್ಲಿ ರಣದೀಪ್ ಸಿಂಗ್ ಸುರ್ಜೇವಾಲ ಮತ್ತು ಡಿ.ಕೆ. ಶಿವಕುಮಾರ್ ಪ್ರತ್ಯೇಕ ಮಾತುಕತೆ ನಡೆಸಿರುವುದು ರಾಜ್ಯ ರಾಜಕಾರಣದಲ್ಲಿ ಕುತೂಹಲ ಕೆರಳಿಸಿದೆ.


ನಿನ್ನೆ ಬೆಂಗಳೂರಿಗೆ ಆಗಮಿಸುತ್ತಿದ್ದಂತೆ ವಿಮಾನ ನಿಲ್ದಾಣದಲ್ಲೇ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆ ಬಗ್ಗೆ ಕಿಡಿ-ಕಾರಿದ್ದರು. ಸಂಜೆ ಡಿ.ಕೆ. ಶಿವಕುಮಾರ್ ಅವರೊಂದಿಗೆ ನಡೆದ ಚರ್ಚೆಯ ಸಂದರ್ಭದಲ್ಲಿ ಚುನಾವಣಾ ಆಯೋಗದ ಅಕ್ರಮಗಳ ವಿರುದ್ಧ ತೀವ್ರ ಹೋರಾಟ ನಡೆಸುವ ಕುರಿತು ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಮೂಲಕವೇ ಚುನಾವಣೆ ಗೆಲ್ಲಲು ಬಿಜೆಪಿ ಸಂಚು ನಡೆಸಿದೆ. ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ಬಗ್ಗೆ ತೀವ್ರ ನಿಗಾವಹಿಸಿ, ಬಿಜೆಪಿ ನಾಯಕರೇ ಆಯೋಗಕ್ಕೆ ಪತ್ರ ಬರೆದು ಮತದಾರರನ್ನು ಡಿಲೀಟ್ ಮಾಡುವಂತೆ ಸಲಹೆ ನೀಡುತ್ತಿದ್ದಾರೆ. ಈ ಬಗ್ಗೆ ಗಮನಹರಿಸುವಂತೆ ಒತ್ತಾಯಿಸಿರುವುದಾಗಿ ತಿಳಿದುಬಂದಿದೆ.

ಸಂಪುಟದಲ್ಲಿ ಖಾಲಿಯಿರುವ ಎರಡು ಸ್ಥಾನಗಳಿಗೆ ನೇಮಕಾತಿ ಮಾಡುವ ಸಂಬಂಧ ಗಂಭೀರ ಚರ್ಚೆ ನಡೆದಿದೆ. ಆದರೆ ಸದ್ಯಕ್ಕೆ ಸಂಪುಟ ವಿಸ್ತರಣೆ-ಯ ಬದಲಾಗಿ ಸ್ಥಳೀಯ ಸಂಸ್ಥೆಗಳ ಚುನಾವಣೆಯತ್ತ ಗಮನ ಹರಿಸಲು ಹೈಕಮಾಂಡ್ ಸಂದೇಶ ನೀಡಿರುವುದಾಗಿ ಮೂಲಗಳು ತಿಳಿಸಿವೆ.

ಕಾಂಗ್ರೆಸ್ ಪಕ್ಷದಲ್ಲಿ ಕೆಲವು ನಾಯಕರು ಶಿಸ್ತನ್ನು ಮೀರಿ ಬಹಿರಂಗ ಹೇಳಿಕೆ ನೀಡುತ್ತಿದ್ದಾರೆ. ಇದನ್ನು ಸಹಿಸಲು ಸಾಧ್ಯವಿಲ್ಲ. ಅಂತಹ ನಾಯಕರಿಗೆ ಕಠಿಣ ಎಚ್ಚರಿಕೆ ನೀಡಬೇಕು ಎಂದು ಸುರ್ಜೇವಾಲ ಸಲಹೆ ನೀಡಿದ್ದಾರೆ ಎನ್ನಲಾಗಿದೆ.

ಪ್ರಸ್ತುತ ಸಂದರ್ಭದಲ್ಲಿ ಚುನಾವಣೆ ನಡೆದರೆ ಸುಮಾರು 50ಕ್ಕೂ ಹೆಚ್ಚಿನ



ಶಾಸಕರು ಹಾಗೂ 20 ಮಂದಿ ಹಾಲಿ ಸಚಿವರು ಸೋಲು ಕಾಣುವ ಸಾಧ್ಯತೆ ಇದೆ ಎಂದು ರಾಜಕೀಯಕ್ಕೆ ಸಂಬಂಧಿಸಿದ ಖಾಸಗಿ ಸಂಸ್ಥೆಯೊಂದು ರಹಸ್ಯ ವರದಿ ನೀಡಿದೆ ಎನ್ನಲಾಗಿದೆ. ಇದನ್ನು ಆಧರಿಸಿ ಇಬ್ಬರೂ ನಾಯಕರು ಗಂಭೀರ ಚರ್ಚೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಕೆಲವು ಶಾಸಕರ ಇಮೇಜ್ ನಷ್ಟವಾಗಿದೆ. ಅವರನ್ನು ಮತ್ತೆ ಚುನಾವಣಾ ಕಣಕ್ಕಿಳಿಸುವುದು ಕಷ್ಟಸಾಧ್ಯ. ಹೀಗಾಗಿ ಅಂತಹ ಕ್ಷೇತ್ರಗಳಲ್ಲಿ ಪರ್ಯಾಯ ನಾಯಕತ್ವದ ಬಗ್ಗೆ ಕಾಳಜಿ ವಹಿಸುವಂತೆ ಹೈಕಮಾಂಡ್ ಸಂದೇಶ ರವಾನಿಸಿದೆ ಎನ್ನಲಾಗಿದೆ.

ಸಂಪುಟದಲ್ಲಿ ಅವಕಾಶ ಸಿಗದ ಮತ್ತು ಕಾಂಗ್ರೆಸ್‌ನಲ್ಲಿ ಪ್ರಾತಿನಿಧ್ಯ ಇಲ್ಲ ಎಂಬ ಅಸಮಾಧಾನದಿಂದ ಕೆಲವು ಶಾಸಕರು ಅನ್ಯ ಪಕ್ಷಗಳತ್ತ ಮುಖ ಮಾಡಿದ್ದಾರೆ. ಇನ್ನೂ ಕೆಲವರು ಪಕ್ಷದ ಸಿದ್ಧಾಂತ-ಕ್ಕೆ ಬದ್ಧರಾಗಿಲ್ಲ. ಅವಕಾಶಗಳಿಗಾಗಿ ಕಾಂಗ್ರೆಸ್‌ನಲ್ಲಿದ್ದಾರೆ ಎನ್ನಲಾಗಿದ್ದು, ಅಂತಹವರನ್ನು ಮುಲಾಜಿಲ್ಲದೆ ಮುಂದಿನ ಚುನಾವಣೆಯಲ್ಲಿ ದೂರ ಇಡುವಂತೆ ಹೈಕಮಾಂಡ್ ಸೂಚನೆ ನೀಡಿದೆ ಎಂದು ಮೂಲಗಳು ತಿಳಿಸಿವೆ.

<image_

ಬಿಡದಿ ಟೌನ್ ಶಿಪ್ : ಉಪವಾಸ ಸತ್ಯಾಗ್ರಹ ನಿರತ ರೈತರಿಗೆ ಧೈರ್ಯ ತುಂಬಿದ ದೇವೇಗೌಡರು



"ಮುಂಜಾನೆಯ ಮೆರಗು"

ಬಿಡದಿ, ಸೆ.25– ಬಿಡದಿ ಉಪನಗರ ಯೋಜನೆಯ ಭ್ರಷ್ಟಾಧಿಕಾರಿಗಳನ್ನು ವಿರೋಧಿಸಿ ಬೈರಮಂಗಲದಲ್ಲಿ ಅಹೋರಾತ್ರಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ರೈತರಿಗೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಧೈರ್ಯ ತುಂಬಿದ್ದಾರೆ.

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಬೈರಮಂಗಲಕ್ಕೆ ಭೇಟಿ ನೀಡಿ ಉಪವಾಸ ನಿರತ ರೈತರ ಆರೋಗ್ಯ ವಿಚಾರಿಸಿ, ಅವರ ಹೋರಾಟಕ್ಕೆ ಸಂಪೂರ್ಣ ಬೆಂಬಲ ಸೂಚಿಸಿದರು. ರೈತರ ಜೊತೆ ನೆಲದ ಮೇಲೆ ಕುಳಿತು ಅವರ ಸಮಸ್ಯೆಗಳನ್ನು ಆಲಿಸಿದರು.

ಇದೇ ವೇಳೆ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ದೂರವಾಣಿ ಮೂಲಕ ಪ್ರತಿಭಟನಾ ನಿರತ ರೈತರ ಜೊತೆ ಮಾತನಾಡಿ, ಧೈರ್ಯ ತುಂಬಿದರು. ರೈತರ ನ್ಯಾಯಯುತ ಹೋರಾಟದಲ್ಲಿ ತಾವು ಜೊತೆಗಿರುವುದಾಗಿ ಭರವಸೆ ನೀಡಿದರು. ಫಲವತ್ತಾದ ಕೃಷಿ ಭೂಮಿಯನ್ನು ಬಲವಂತವಾಗಿ ಸ್ವಾಧೀನಪಡಿಸಿಕೊಳ್ಳುತ್ತಿರುವ ರಾಜ್ಯ ಸರ್ಕಾರದ ಕ್ರಮದ ವಿರುದ್ಧ ಪ್ರತಿಭಟನೆ ನಡೆಸಿ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ಸಮಗ್ರ ಅಭಿವೃದ್ಧಿಗೆ ಪೂರಕ ವಾತಾವರಣ ಅಗತ್ಯ : ಸಚಿವ ಯತೀಂದ್ರ ಸಿದ್ದರಾಮಯ್ಯ



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.25– ರಾಜ್ಯದ ನಗರಗಳ ಸಮಗ್ರ ಅಭಿವೃದ್ಧಿಗೆ ಯೋಜಿತ ನಗರೀಕರಣ, ಗುಣಮಟ್ಟದ ಮೂಲಸೌಕರ್ಯ, ಸುಸ್ಥಿರ ಅಭಿವೃದ್ಧಿ ಹಾಗೂ ಹೂಡಿಕೆಗೆ ಪೂರಕವಾದ ವಾತಾವರಣ ಅತ್ಯಂತ ಅಗತ್ಯ ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಇಂದು ಮಾಧ್ಯಮ ಸಂಸ್ಥೆಗಳು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಿಯಲ್ ಎಸ್ಟೇಟ್ ಕ್ಷೇತ್ರದ ಪ್ರಸ್ತುತ ಬೆಳವಣಿಗೆಗಳು ಹಾಗೂ ಭವಿಷ್ಯದ ಸಾಧ್ಯತೆಗಳ ಕುರಿತು ತಮ ಅಭಿಪ್ರಾಯ ಹಂಚಿಕೊಂಡರು. ರಿಯಲ್ ಎಸ್ಟೇಟ್ ಕ್ಷೇತ್ರವು ಕೇವಲ ಕಟ್ಟಡ ನಿರ್ಮಾಣ ಅಥವಾ ಆಸ್ತಿ ಹೂಡಿಕೆಗೆ ಸೀಮಿತವಾಗಿಲ್ಲ.

ಇದು ಉದ್ಯೋಗ ಸೃಷ್ಟಿ, ಆರ್ಥಿಕ ಚಟುವಟಿಕೆಗಳ ವಿಸ್ತರಣೆ ಹಾಗೂ ನಗರಗಳ ಭವಿಷ್ಯದ ರೂಪುರೇಷೆಗಳನ್ನು ನಿರ್ಧರಿಸುವ ಪ್ರಮುಖ ಕ್ಷೇತ್ರವಾಗಿದೆ ಎಂದು ಸಚಿವರು ಹೇಳಿದರು.

ನಗರಗಳ ಬೆಳವಣಿಗೆಯೊಂದಿಗೆ ರಸ್ತೆ, ನೀರು, ಒಳಚರಂಡಿ, ಸಾರ್ವಜನಿಕ ಸಾರಿಗೆ, ತ್ಯಾಜ್ಯ ನಿರ್ವಹಣೆ, ಹಸಿರು ಪ್ರದೇಶಗಳು ಹಾಗೂ ಇತರೆ ನಾಗರಿಕ ಮೂಲಸೌಕರ್ಯಗಳು ಸಮರ್ಪಕವಾಗಿ ಅಭಿವೃದ್ಧಿಯಾಗಬೇಕು. ನಗರಾಭಿವೃದ್ಧಿ ಮತ್ತು ರಿಯಲ್ ಎಸ್ಟೇಟ್ ಕ್ಷೇತ್ರದ ಬೆಳವಣಿಗೆ ಪರಸ್ಪರ ಪೂರಕವಾಗಿ ಸಾಗಿದಾಗ ಮಾತ್ರ ಸುಸ್ಥಿರ ಹಾಗೂ ಜನಕೇಂದ್ರಿತ ನಗರಾಭಿವೃದ್ಧಿ ಸಾಧ್ಯ ಎಂದು ಅವರು ತಿಳಿಸಿದರು.

ನಗರಾಭಿವೃದ್ಧಿಯ ಅಗತ್ಯತೆಗಳು ಮತ್ತು ರಿಯಲ್ ಎಸ್ಟೇಟ್ ಕ್ಷೇತ್ರದ ಬೆಳವಣಿಗೆಯ ನಡುವೆ ಪರಸ್ಪರ ಪೂರಕವಾಗುವಂತೆ, ಸಾರ್ವಜನಿಕ ಹಿತಾಸಕ್ತಿಯನ್ನು ಕೇಂದ್ರದಲ್ಲಿಟ್ಟುಕೊಂಡು ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಕಾರ್ಯಕ್ರಮದಲ್ಲಿ ವಿಚಾರ ವಿನಿಮಯ ನಡೆಯಿತು.

ನಗರವನ್ನು ನಾವು ನಿರ್ಮಿಸುವ ಕಟ್ಟಡಗಳಿಂದ ಮಾತ್ರ ಅಳೆಯಲು ಸಾಧ್ಯವಿಲ್ಲ. ಅದರ ಸುತ್ತ ಸೃಷ್ಟಿಯಾಗುವ ಬದುಕು, ಜೀವನೋಪಾಯ ಮತ್ತು ಅವಕಾಶಗಳೇ ನಗರದ ನಿಜವಾದ ಸ್ವರೂಪವನ್ನು ನಿರ್ಧರಿಸುತ್ತವೆ ಎಂಬ ಆಶಯವನ್ನು ಸಚಿವರು ವ್ಯಕ್ತಪಡಿಸಿದರು. ಕರ್ನಾಟಕದ ನಗರಾಭಿವೃದ್ಧಿ ಬೆಂಗಳೂರಿಗೆ ಮಾತ್ರ ಸೀಮಿತವಾಗದೆ, ರಾಜ್ಯದ ವಿವಿಧ ನಗರಗಳು ಹಾಗೂ ಪ್ರದೇಶಗಳ ಸಮತೋಲಿತ ಅಭಿವೃದ್ಧಿಗೆ ಆದ್ಯತೆ ನೀಡುವ ಅಗತ್ಯವಿದೆ. ಹೂಡಿಕೆ, ಉದ್ಯೋಗ ಮತ್ತು ಮೂಲಸೌಕರ್ಯಗಳ ಅವಕಾಶಗಳು ರಾಜ್ಯದಾದ್ಯಂತ ವಿಸ್ತರಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಟೈಮ್ಸ್ ಗ್ರೂಪ್ಸ್ ಡಿಜಿಟಲ್ ವಿಭಾಗವಾದ ಟೈಮ್ಸ್ ಇಂಟರ್‌ನೆಟ್ ಗ್ರೂಪ್ ಬಿಸಿನೆಸ್ ಹೆಡ್ ಶ್ರೀರಾಮ್ ಹೆಬ್ಬಾರ್, ವಿಜಯ ಕರ್ನಾಟಕ ವೆಬ್ (ಡಿಜಿಟಲ್) ಆವೃತ್ತಿಯ ಸಂಪಾದಕ ಶ್ರೀ ಪ್ರಸಾದ್ ನಾಯಕ್ ಹಾಗೂ ವಿವಿಧ ರಿಯಲ್ ಎಸ್ಟೇಟ್ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಜಗಳೂರಿನಲ್ಲಿ ಸೆ.27ರಂದು ಉಚಿತ ಆರೋಗ್ಯ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ



"ಮುಂಜಾನೆಯ ಮೆರಗು"

ಜಗಳೂರು ಸೆ, 25– ಜಗಳೂರು ವಿಧಾನಸಭಾ ಕ್ಷೇತ್ರದ ಜನರ ಆರೋಗ್ಯದ ಹಿತದೃಷ್ಟಿಯಿಂದ ವಿಶೇಷ ಉಚಿತ ಆರೋಗ್ಯ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರವನ್ನು ಸೆ.27ರ ಭಾನುವಾರ ಜಗಳೂರು ಪಟ್ಟಣದ ವಾಲ್ಮೀಕಿ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕೆಪಿಸಿಸಿ ಎಸ್ಟಿ ಘಟಕದ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ತಿಳಿಸಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ದೊರೆಯಬೇಕು ಎಂಬ ಉದ್ದೇಶದಿಂದ ಶಿಬಿರ ಆಯೋಜಿಸಲಾಗಿದೆ. ಶಿಬಿರದಲ್ಲಿ ವಿವಿಧ ಕಾಯಿಲೆಗಳಿಗೆ ಸಂಬಂಧಿಸಿದಂತೆ ತಜ್ಞ ವೈದ್ಯರಿಂದ ಆರೋಗ್ಯ ತಪಾಸಣೆ ಹಾಗೂ ವೈದ್ಯಕೀಯ ಸಲಹೆ ನೀಡಲಾಗುವುದು. ಅಗತ್ಯವಿರುವ ರೋಗಿಗಳನ್ನು ಗುರುತಿಸಿ, ಶಸ್ತ್ರಚಿಕಿತ್ಸೆ ಅಗತ್ಯವಿರುವವರಿಗೆ ಮುಂದಿನ ಚಿಕಿತ್ಸಾ ಕ್ರಮಗಳ ಕುರಿತು ಮಾರ್ಗದರ್ಶನ ನೀಡಲಾಗುವುದು ಎಂದು ಹೇಳಿದರು.

ತಾಲೂಕಿನ ಗ್ರಾಮೀಣ ಪ್ರದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಿ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು. ಆರೋಗ್ಯ ಸಮಸ್ಯೆಗಳನ್ನು ನಿರ್ಲಕ್ಷಿಸದೆ ಸಮಯಕ್ಕೆ ಸರಿಯಾಗಿ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯವಾಗಿದ್ದು, ಸಾರ್ವಜನಿಕರು ತಮ್ಮ ಕುಟುಂಬದ ಸದಸ್ಯರೊಂದಿಗೆ ಶಿಬಿರಕ್ಕೆ ಆಗಮಿಸುವಂತೆ ಅವರು ಮನವಿ ಮಾಡಿದರು.

ವಿಶೇಷವಾಗಿ ಬಡವರು, ಕೂಲಿ ಕಾರ್ಮಿಕರು ಹಾಗೂ ಗ್ರಾಮೀಣ ಭಾಗದ ಜನರಿಗೆ ಇಂತಹ ಉಚಿತ ಆರೋಗ್ಯ ಶಿಬಿರಗಳು ನೆರವಾಗಲಿವೆ. ಆರೋಗ್ಯ ತಪಾಸಣೆಯ ಮೂಲಕ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚಿ ಸೂಕ್ತ ಚಿಕಿತ್ಸೆ ಪಡೆಯಲು ಅವಕಾಶ ಕಲ್ಪಿಸಲಾಗಿದ್ದು, ಸಾರ್ವಜನಿಕರು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ಎಂ.ಡಿ. ಕೀರ್ತಿಕುಮಾರ್ ಮನವಿ ಮಾಡಿದರು.

2028ರಲ್ಲೂ ಡಿಕೆಶಿ ಮತ್ತೆ ಸಿಎಂ ಆದರೆ ನನ್ನ ಅಭ್ಯಂತರ ಇಲ್ಲ : ಸತೀಶ್ ಜಾರಕಿಹೊಳಿ



"ಮುಂಜಾನೆಯ ಮೆರಗು"

ಮೈಸೂರು, ಸೆ.25– ಮುಖ್ಯಮಂತ್ರಿಯಾಗಲು ತಮಗೆ ಆತುರವೇನಿಲ್ಲ. 2028ರ ವಿಧಾನಸಭಾ ಚುನಾವಣೆಯ ಬಳಿಕ ಡಿ.ಕೆ.ಶಿವಕುಮಾರ್ ಮತ್ತೆ ಮುಖ್ಯಮಂತ್ರಿಯಾಗುವುದಾದರೆ ತಮ ಅಭ್ಯಂತರ ಇಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮಹತ್ವದ ಹೇಳಿಕೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2028ರ ಚುನಾವಣೆ ಬಳಿಕ ತಾವೇ ಮುಂದಿನ ಮುಖ್ಯಮಂತ್ರಿ ಎಂದು ಡಿ.ಕೆ.ಶಿವಕುಮಾರ್ ಎಲ್ಲಾ ಕಡೆ ಹೇಳಿಕೊಳ್ಳುತ್ತಿರುವುದಕ್ಕೆ ಪ್ರತಿಕ್ರಿಯಿಸಿದರು. ಅವರ ಪ್ರಯತ್ನ ಮತ್ತು ಫಲ ಇದ್ದರೆ ಮತ್ತೆ ಡಿ.ಕೆ.ಶಿವಕುಮಾರ್ ಏಕೆ ಮುಖ್ಯಮಂತ್ರಿಯಾಗಬಾರದು? ಎಂದು ಪ್ರಶ್ನಿಸಿದರು.

2028ಕ್ಕೆ ತಾವು ಮುಖ್ಯಮಂತ್ರಿಯಾಗುವುದಾಗಿ ಹೇಳಿದ್ದು ನಿಜ. ಆದರೆ ಈಗ ಡಿ.ಕೆ.ಶಿವಕುಮಾರ್ ಪ್ರಯತ್ನ ಮಾಡುತ್ತಿದ್ದಾರೆ. ನನಗೆ ಇನ್ನೂ ವಯಸ್ಸಿದೆ. ಆತುರವೇನಿಲ್ಲ, ನಿರೀಕ್ಷೆಯಲ್ಲಿದ್ದೇನೆ. ಮೊದಲ ಸರದಿಯಲ್ಲಿರುವವರು ಅಧಿಕಾರ ಅನುಭವಿಸಿ ಸಮಾಧಾನದಿಂದ ಕೆಳಗಿಳಿಯಲಿ.

ನಾನು ಮುಖ್ಯಮಂತ್ರಿಯಾಗಲೇಬೇಕು ಎಂದು ಹೇಳಲಿಲ್ಲ, ನಮ ಸರ್ಕಾರ ಬಂದಾಗ ಸನ್ನಿವೇಶ ಆಧರಿಸಿ ತೀರ್ಮಾನಿಸುವುದಾಗಿ ಹೇಳಿದ್ದೆ. ಈಗಲೂ ಅದೇ ಹೇಳಿಕೆಗೆ ಬದ್ಧನಾಗಿದ್ದೇನೆ ಎಂದರು.

ರಾಜಕೀಯವಾಗಿ ಕುಗ್ಗಿಸಲಿಕ್ಕಾಗಿಯೇ ಜಾರಿ ನಿರ್ದೇಶನಾಲಯ ದಾಳಿಯಾಗಿದೆ ಎಂಬುದು ಬೇರೆ ವಿಚಾರ. ನಾನು ಕುಗ್ಗುವ ಪ್ರಶ್ನೆಯೇ ಇಲ್ಲ. ದಿನನಿತ್ಯದ ಕೆಲಸಗಳನ್ನು ಮುಂದುವರಿಸಲೇಬೇಕು. ಕಾನೂನು ಬದ್ಧವಾಗಿಯೇ ನಾನು ತನಿಖೆಯನ್ನು ಎದರಿಸುತ್ತೇನೆ ಎಂದರು.

ನೀಲಿ ಶಾಲು ವಿಚಾರವಾಗಿ ಮಾಜಿ ಸಂಸದ ಪ್ರತಾಪ್‌ಸಿಂಹ ಹೇಳಿಕೆಗೆ ಈಗಾಗಲೇ ಉತ್ತರ ನೀಡಲಾಗಿದೆ. ನನಗೆ ಈ ಶಾಲಿನ ಮಹತ್ವ ಗೊತ್ತಿದೆ. ಅದಕ್ಕಾಗಿ ಶಾಲು ಹಾಕಿಕೊಂಡಿದ್ದೇನೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ನನ್ನ ಮತ್ತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡುವೆ ಸಂಬಂಧ ಚೆನ್ನಾಗಿದೆ. ಅವರು ಮುಖ್ಯಮಂತ್ರಿಯಾಗಿದ್ದಾಗಲೂ ಅಂತರ ಕಾಯ್ದುಕೊಂಡಿದ್ದೆ. ಸಭೆ ಕರೆದಾಗ ಹೋಗುತ್ತಿದ್ದೆ. ಈಗಲೂ ಹಾಗೆಯೇ ಇದ್ದೇನೆ. ತಮ ಮೇಲೆ ಇಡಿ ದಾಳಿಯಾದಾಗ ಯತೀಂದ್ರ ಬಂದು ಭೇಟಿ ಮಾಡಿದ್ದಾರೆ. ಮನೆಗೆ ಒಬ್ಬರು ಬಂದರೆ ಸಾಕಲ್ಲವೇ? ಮನೆಮಂದಿಯಲ್ಲಾ ಬರಬೇಕೆ? ಎಂದು ಪ್ರಶ್ನಿಸಿದರು.

ಅಹಿಂದದಲ್ಲಿ ಒಡಕ್ಕಿಲ್ಲ. ಇತ್ತೀಚೆಗೆ ನಡೆದ ಹಿಂದುಳಿದ ವರ್ಗಗಳ ಸಮಾವೇಶ ಕಾರ್ಯಕ್ರಮದಲ್ಲಿ ಭಾಗವಹಿಸಿಲ್ಲ ಎಂದಾಕ್ಷಣಕ್ಕೆ ಒಡಕು ಇದೆ ಎಂದು ಭಾವಿಸಬೇಕಿಲ್ಲ. ಸಿದ್ದರಾಮಯ್ಯ ಅವರ ಜೊತೆ ಸದಾಕಾಲ ಒಂದು ಸೇನೆ ಇದ್ದೇ ಇದೆ. ಅದಕ್ಕೆ ಅವರೇ ನಾಯಕರು. ಅವರ ನಂತರ ನಾನು ಕ್ಯಾಪ್ಟನ್ ಎಂದು ಹೇಳಿದರು.

ಜಾರಿ ನಿರ್ದೇಶನಾಲಯದಿಂದ ವಿಚಾರದಲ್ಲಿ ತಮಗೆ ಇನ್ನೂ ನೋಟೀಸ್ ಈವರೆಗೂ ಬಂದಿಲ್ಲ. ಶೀಘ್ರವೇ ಬರುವ ನಿರೀಕ್ಷೆ ಇದೆ. ತಮ ವಿರುದ್ಧ ಕೇಳಿಬಂದಿರುವ ಆರೋಪಗಳಿಗೆ ಮತ್ತು ಪ್ರಶ್ನೆಗಳಿಗೆ ಅಲ್ಲಿಯೇ ಉತ್ತರ ನೀಡುತ್ತೇನೆ. ನನ್ನ ಮೇಲೆ ಏಕೆ ದಾಳಿಯಾಗಿದೆ ಎಂಬುದಕ್ಕೆ ಉತ್ತರಿಸಲು ಸಮಯಬೇಕಾಗುತ್ತದೆ ಎಂದರು.

ಈವರೆಗಿನ ಇಡಿಯ ದಾಳಿಗಳು ಕೇವಲ ವಿರೋಧ ಪಕ್ಷದ ನಾಯಕರ ಮೇಲಷ್ಟೇ ಆಗಿದೆ. ಬಿಜೆಪಿಯವರ ಮೇಲೆ ಯಾವುದೇ ಕಾರ್ಯಾಚರಣೆಗಳಾಗಿಲ್ಲ. ದಾಳಿ ನೆಪದಲ್ಲಿ ಒತ್ತಡ, ರಾಜಕೀಯ ಕಿರುಕುಳ ಎಲ್ಲವೂ ನಿರೀಕ್ಷಿತ ಎಂದು ಹೇಳಿದರು. ಆರ್ಥಿಕ ಇಲಾಖೆ ಪತ್ರ ಬರೆಯುವುದು ಎಲ್ಲಾ ಕಾಲದಲ್ಲೂ ಸಾಮಾನ್ಯ. ಬಜೆಟ್ ಘೋಷಿತ ಎಲ್ಲಾ ಯೋಜನೆಗಳಿಗೂ ನಮಲ್ಲಿ ಹಣ ಇದೆ. ಆದರೆ ಹೊಸ ಯೋಜನೆಗಳ ಘೋಷಣೆಗೆ ಹಣ ಇಲ್ಲ. ಖರ್ಚಾಗದೇ ಉಳಿದ ಹಣದಲ್ಲಿ ಹೊಸ ಯೋಜನೆಗಳನ್ನು ಎಲ್ಲಾ ಸರ್ಕಾರಗಳು ಜಾರಿಗೊಳಿಸಿವೆ. ಈಗ ನಮ ಬಳಿ ದುಡ್ಡಿಲ್ಲ ಅಂತೇನಿಲ್ಲ. ಆದರೆ ಹೊಸ ಯೋಜನೆಗಳಿಗೆ ಹಣ ಇಲ್ಲ ಎಂದರು.

ಕ್ರೀಡೆ ಮತ್ತು ಸಾಹಸ ಪ್ರವಾಸೋದ್ಯಮ ಉತ್ತೇಜನಕ್ಕೆ ಹೊಸ ಯೋಜನೆ : ಸಚಿವ ಕೆ.ಜೆ.ಜಾರ್ಜ್



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.25– ರಾಜ್ಯದ ಕ್ರೀಡಾ ಕಾರ್ಯಕ್ರಮಗಳನ್ನು ಪ್ರವಾಸೋದ್ಯಮದೊಂದಿಗೆ ಜೋಡಿಸಿ ಹೊಸ ಕ್ರೀಡಾ, ಪ್ರವಾಸದ ಅನುಭವ ಮತ್ತು ಸ್ಥಳೀಯ ಆರ್ಥಿಕ ಅವಕಾಶಗಳನ್ನು ಸೃಷ್ಟಿಸುವ ಉದ್ದೇಶದಿಂದ ಹೊಸ ಕ್ರೀಡೆ ಮತ್ತು ಸಾಹಸ ಪ್ರವಾಸೋದ್ಯಮ ಯೋಜನೆಗೆ ಚಾಲನೆ ನೀಡಲಾಗುವುದು ಎಂದು ಇಂಧನ , ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಯೋಜನೆಯ ಮೊದಲ ಹಂತವಾಗಿ ಪ್ರಮುಖ ಕ್ರೀಡಾ ಕಾರ್ಯಕ್ರಮ ಆಯೋಜಕರೊಂದಿಗೆ ಪ್ರವಾಸೋದ್ಯಮ ಇಲಾಖೆ ಒಪ್ಪಂದಕ್ಕೆ ಸಹಿ ಹಾಕಲಿದ್ದು, ರಾಜ್ಯದಲ್ಲಿ ನಡೆಯುವ ಮ್ಯಾರಥಾನ್, ಸೈಕ್ಲಿಂಗ್, ಟ್ರಯಥ್ಲಾನ್ ಸೇರಿದಂತೆ ಪ್ರಮುಖ ಎಂಡ್ಯೂರನ್ಸ್ ಇವೆಂಟ್ಸ್ ಗಳನ್ನು ಸಂಬಂಧಿತ ಪ್ರವಾಸಿ ತಾಣಗಳೊಂದಿಗೆ ಜೋಡಿಸಲು ಉದ್ದೇಶಿಸಲಾಗಿದೆ.

ಕ್ರೀಡಾ ಕಾರ್ಯಕ್ರಮಕ್ಕೆ ಬರುವವರು ಕೇವಲ ಸ್ಪರ್ಧಾಳುಗಳಾಗಿ ಹಿಂದಿರುಗಬಾರದು. ಅವರೊಂದಿಗೆ ಬರುವ ಕುಟುಂಬ ಮತ್ತು ಸ್ನೇಹಿತರೂ ಕರ್ನಾಟಕದ ಕ್ರೀಡಾ ಪ್ರವಾಸವನ್ನು ಅನುಭವಿಸುವ ಪ್ರವಾಸಿಗರಾಗಬೇಕು. ಕಮ್ ಫಾರ್ ದಿ ಸ್ಪೋರ್ಟ್ಸ್, ಸ್ಟೇ ಫಾರ್ ಕರ್ನಾಟಕ ಎಂಬುದು ಈ ಉಪಕ್ರಮದ ಮೂಲ ಆಶಯ ಅವರು ಹೇಳಿದರು.

ಬೆಂಗಳೂರು, ಮೈಸೂರು, ಕರಾವಳಿ ಮತ್ತು ಇತರೆ ತಾಣಗಳಲ್ಲಿ ನಡೆಯುವ ಕ್ರೀಡಾ ಕಾರ್ಯಕ್ರಮಗಳೊಂದಿಗೆ 2 3 ದಿನಗಳ ಪ್ರವಾಸಿಗರ ವಾಸ್ತವ್ಯ, ಸ್ಥಳೀಯ ಆಹಾರ, ಪರಂಪರೆ, ಸಂಸ್ಕೃತಿ ಮತ್ತು ಪ್ರವಾಸಿ ಅನುಭವಗಳನ್ನು ಜೋಡಿಸುವ ಯೋಜನೆ ರೂಪಿಸಲಾಗುತ್ತಿದೆ.

ಮುಂದಿನ ಹಂತದಲ್ಲಿ ಸರ್ಫಿಂಗ್, ಕಯಾಕಿಂಗ್, ವಾಟರ್ ಸ್ಪೋರ್ಟ್ಸ್ , ಟ್ರೇಲ್ ರನ್ನಿಂಗ್, ಸೈಕ್ಲಿಂಗ್ ಮತ್ತು ಇತರೆ ಸಾಹಸ ಕ್ರೀಡೆಗಳನ್ನು ಒಳಗೊಂಡ ರಾಜ್ಯವ್ಯಾಪಿ ಸ್ಪೋರ್ಟ್ಸ್ ಅಡ್ವೆಂಚರ್ ಟೂರಿಸಂ ಕ್ಯಾಲೆಂಡರ್ ರೂಪಿಸುವ ಉದ್ದೇಶವಿದೆ.

ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಪ್ರತಿಯೊಂದು ಪ್ರಮುಖ ಕ್ರೀಡಾ ಕಾರ್ಯಕ್ರಮವನ್ನೂ ಆಯಾ ಸ್ಥಳದ ಐತಿಹ್ಯ ತಿಳಿಯುವ ಅನುಭವದ ಜೊತೆ ಜೋಡಿಸುವುದು ನಮ ಉದ್ದೇಶ. ಇದರಿಂದ ಪ್ರವಾಸಿಗರ ವಾಸ್ತವ್ಯ ಅವಧಿ ಹೆಚ್ಚಿಸುವುದರ ಜೊತೆಗೆ ಹೋಟೆಲ್, ಹೋಂಸ್ಟೇ, ಸ್ಥಳೀಯ ಸಾರಿಗೆ, ಆಹಾರ, ಮಾರ್ಗದರ್ಶಕರು ಮತ್ತು ಸಣ್ಣ ಉದ್ಯಮಗಳಿಗೆ ನೇರ ಆರ್ಥಿಕ ಅವಕಾಶ ಸೃಷ್ಟಿಸಬಹುದು ಎಂದು ಹೇಳಿದರು. ಆಕ್ಟೀವ್ ಕರ್ನಾಟಕವನ್ನು ಹಂತ ಹಂತವಾಗಿ ರಾಜ್ಯದ ವಿವಿಧ ತಾಣಗಳಿಗೆ ವಿಸ್ತರಿಸಿ, ಕರ್ನಾಟಕವನ್ನು ಕ್ರೀಡೆ ಮತ್ತು ಸಾಹಸ ಪ್ರವಾಸೋದ್ಯಮದ ಪ್ರಮುಖ ತಾಣವಾಗಿ ರೂಪಿಸುವುದು ಇಲಾಖೆಯ ಗುರಿಯಾಗಿದೆ.

ಮೊದಲ ಹಂತವಾಗಿ ಎನ್‌ಇಬಿ ಸ್ಪೋರ್ಟ್ಸ್ ಸಂಸ್ಥೆಯ ಜೊತೆಗೆ ಪ್ರವಾಸೋದ್ಯಮ ಇಲಾಖೆ ಒಪ್ಪಂದ ಮಾಡಿಕೊಳ್ಳಲಿದೆ. ಈ ಸಂಸ್ಥೆಯ ಜೊತೆಗೂಡಿ ಮ್ಯಾರಥಾನ್, ಸೈಕ್ಲಾಥಾನ್ ಹಾಗೂ ಟ್ರಯಥ್ಲಾನ್ ಚಟುವಟಿಕೆಗಳನ್ನು ಇವರ ಜೊತೆಗೂಡಿ ಕಾರ್ಯಕ್ರಮಗಳನ್ನು ಆಯೋಜಿಸಲಿದೆ.

ಪತ್ನಿಯನ್ನು ಕೊಂದು ಖಾಲಿ ಸೈಟ್ನಲ್ಲಿ ಶವ ಬಿಸಾಡಿದ ಪತಿಯ ಬಂಧನ





"ಮುಂಜಾನೆಯ ಮೆರಗು"

ಬೆಂಗಳೂರು, ಸೆ.25– ಖಾಲಿ ಸೈಟ್‌ನಲ್ಲಿ ಒಡಿಶಾ ಮೂಲದ ಮಹಿಳೆಯ ಶವ ಪತ್ತೆಯಾದ ಪ್ರಕರಣವನ್ನು ಸಂಪಿಗೆಹಳ್ಳಿ ಠಾಣೆ ಪೊಲೀಸರು ಬೇಧಿಸಿ, ಆರೋಪಿಯನ್ನು ಕೊನೆಗೂ ಪತ್ತೆಹಚ್ಚಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಕೊಲೆಯಾದ ಮಹಿಳೆಯನ್ನು ಅನುಸೂಯ (28) ಎಂದು ಗುರುತಿಸಲಾಗಿದೆ. ಈಕೆ ಮೂಲತಃ ಒಡಿಶಾದವರು.

ನಗರದಲ್ಲಿರುವ ಖಾಲಿ ಸೈಟ್‌ಗಳನ್ನು ಮಾಲೀಕರು ಸ್ವಚ್ಛಗೊಳಿಸುವಂತೆ ಜಿಬಿಎ ಸೂಚನೆ ನೀಡಿತ್ತು. ಈ ಹಿನ್ನೆಲೆಯಲ್ಲಿ ಸಂಪಿಗೆಹಳ್ಳಿ ಬಳಿಯ ಎಂಎಸ್ ನಗರ ಅಗ್ರಹಾರ ಲೇಔಟ್ನ ಖಾಲಿ ಸೈಟ್‌ನಲ್ಲಿ ಗಿಡ–ಗಂಟಿಗಳನ್ನು ಮಾಲೀಕರು ಸ್ವಚ್ಛಗೊಳಿಸುತ್ತಿದ್ದಾಗ, ಕೊಳೆತ ಸ್ಥಿತಿಯಲ್ಲಿ ಮಹಿಳೆಯ ಶವ ಕಂಡು ಕೂಲಿ ಕಾರ್ಮ

ಮಳೆ ಕೊರತೆ: ನೀರಿನ ಮಿತ ಬಳಕೆಗೆ ಗ್ರಾಮಸ್ಥರಿಗೆ ಇಒ ಕೆಂಚಪ್ಪ ಮನವಿ

"ಮುಂಜಾನೆಯ ಮೆರಗು"

ಜಗಳೂರು ಸೆ, 25– ಮುಂಗಾರು ಮಳೆ ಕೊರತೆಯಿಂದಾಗಿ ತಾಲೂಕಿನ ಹಲವು ಗ್ರಾಮಗಳಲ್ಲಿ ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಳ್ಳುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮವಾಗಿ ನೀರನ್ನು ಮಿತವಾಗಿ ಹಾಗೂ ಅವಶ್ಯಕತೆಗೆ ತಕ್ಕಂತೆ ಬಳಕೆ ಮಾಡಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಮನವಿ ಮಾಡಿದರು.

ಪತ್ರಿಕೆಯೊಂದಿಗೆ ಮಾತನಾಡಿದ ಅವರು, ಜಗಳೂರು ತಾಲೂಕಿನಲ್ಲಿ ಮುಂಗಾರು ಮಳೆಯ ಪ್ರಮಾಣ ಕಡಿಮೆಯಾಗಿರುವ ಪರಿಣಾಮ ಗ್ರಾಮೀಣ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಕುಸಿಯುವ ಆತಂಕ ಎದುರಾಗಿದೆ. ತಾಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಲಭ್ಯತೆ ಕುರಿತು ಮುನ್ನೆಚ್ಚರಿಕೆ ವಹಿಸುವ ಅಗತ್ಯವಿದೆ. ಈಗಾಗಲೇ ಕೆಲವು ಗ್ರಾಮಗಳಲ್ಲಿ ನೀರಿನ ಸಮಸ್ಯೆ ಕಂಡುಬರುತ್ತಿದ್ದು, ಮುಂದಿನ ದಿನಗಳಲ್ಲಿ ಪರಿಸ್ಥಿತಿ ಮತ್ತಷ್ಟು ಗಂಭೀರವಾಗದಂತೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಹೇಳಿದರು.

ಮನೆ ಬಳಕೆಗೆ ಅಗತ್ಯವಿರುವಷ್ಟು ಮಾತ್ರ ನೀರನ್ನು ಬಳಸಬೇಕು. ಕುಡಿಯುವ ನೀರನ್ನು ಅನಗತ್ಯವಾಗಿ ವ್ಯರ್ಥ ಮಾಡದಂತೆ ಪ್ರತಿಯೊಬ್ಬರೂ ಜಾಗೃತಿ ವಹಿಸಬೇಕು. ನೀರಿನ ಮೂಲಗಳು ಹಾಗೂ ಗ್ರಾಮಗಳಿಗೆ ಪೂರೈಕೆಯಾಗುವ ನೀರನ್ನು ಸಮರ್ಪಕವಾಗಿ ಬಳಸಿಕೊಂಡರೆ ಲಭ್ಯವಿರುವ ನೀರನ್ನು ಹೆಚ್ಚಿನ ದಿನಗಳವರೆಗೆ ಸಂರಕ್ಷಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.



ಮಿನಿ ಟ್ಯಾಂಕರ್‌ಗಳ ನೀರು ವ್ಯರ್ಥವಾಗದಂತೆ ಎಚ್ಚರಿಕೆ

ನೀರಿನ ಸಮಸ್ಯೆ ಎದುರಾಗಿರುವ ಗ್ರಾಮಗಳಿಗೆ ಅಗತ್ಯಕ್ಕೆ ಅನುಗುಣವಾಗಿ ಮಿನಿ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಟ್ಯಾಂಕರ್‌ಗಳಿಗೆ ಅಳವಡಿಸಿರುವ ನಲ್ಲಿಗಳ ಟ್ಯಾಪ್‌ಗಳನ್ನು ಸಾರ್ವಜನಿಕರು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಬೇಕು. ಟ್ಯಾಪ್‌ಗಳನ್ನು ತೆರೆದೆಯೇ ಬಿಡುವುದರಿಂದ ನೀರು ವ್ಯರ್ಥವಾಗುವ ಸಾಧ್ಯತೆ ಇರುವುದರಿಂದ ಬಳಕೆ ಮುಗಿದ ತಕ್ಷಣ ನಲ್ಲಿಗಳನ್ನು ಬಂದ್ ಮಾಡಬೇಕು ಎಂದು ಕೆಂಚಪ್ಪ ಸೂಚಿಸಿದರು.

ನೀರಿನ ಸಮಸ್ಯೆ ಇರುವ ಗ್ರಾಮಗಳತ್ತ ನೀರುಗಂಟಿಗಳು ಹೆಚ್ಚಿನ ಗಮನ ಹರಿಸಿ, ಗ್ರಾಮಗಳಲ್ಲಿನ ನೀರಿನ ಲಭ್ಯತೆ ಹಾಗೂ ಸಮಸ್ಯೆಗಳ ಕುರಿತು ಸ್ಥಳೀಯ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಯಾವುದೇ ಗ್ರಾಮದಲ್ಲಿ ನೀರಿನ ಸಮಸ್ಯೆ ತೀವ್ರಗೊಂಡರೆ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಪರ್ಯಾಯ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಮಳೆ ಬಂದರೆ ಪರಿಸ್ಥಿತಿ ಸುಧಾರಣೆ ಸಾಧ್ಯ

ತಾಲೂಕಿನಲ್ಲಿ ಉತ್ತಮ ಮಳೆಯಾದರೆ ಮಾತ್ರ ಕೆರೆ–ಕಟ್ಟೆ, ಕೊಳವೆಬಾವಿ ಸೇರಿದಂತೆ ವಿವಿಧ ಜಲಮೂಲಗಳಿಗೆ ನೀರಿನ ಮರುಪೂರಣವಾಗಿ ಕುಡಿಯುವ ನೀರಿನ ಪರಿಸ್ಥಿತಿ ಸುಧಾರಿಸಲು ಸಾಧ್ಯವಾಗಲಿದೆ. ಆದ್ದರಿಂದ ಸಾರ್ವಜನಿಕರು ನೀರಿನ ಮಹತ್ವವನ್ನು ಅರಿತು ಈಗಿನಿಂದಲೇ ಮಿತ ಬಳಕೆಗೆ ಮುಂದಾಗಬೇಕು.

ನೀರಿನ ಸಂರಕ್ಷಣೆ ಕೇವಲ ಅಧಿಕಾರಿಗಳ ಜವಾಬ್ದಾರಿಯಲ್ಲ. ಗ್ರಾಮಸ್ಥರು, ಜನಪ್ರತಿನಿಧಿಗಳು ಹಾಗೂ ಸ್ಥಳೀಯ ಸಂಘ–ಸಂಸ್ಥೆಗಳು ಒಟ್ಟಾಗಿ ಕೈಜೋಡಿಸಿದಾಗ ಮಾತ್ರ ನೀರಿನ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ಎದುರಿಸಲು ಸಾಧ್ಯ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ತಾಲೂಕು ಆಡಳಿತದೊಂದಿಗೆ ಸಹಕರಿಸಬೇಕು ಎಂದು ತಾಲೂಕು ಪಂಚಾಯಿತಿ ಇಒ ಕೆಂಚಪ್ಪ ಮನವಿ ಮಾಡಿದರು.

ಪೌರಕಾರ್ಮಿಕರ ದಿನಾಚರಣೆ: ಬೆಂಗಳೂರಿಗೆ ಜಗಳೂರು ಪೌರಕಾರ್ಮಿಕರ ತಂಡ

"ಮುಂಜಾನೆಯ ಮೆರಗು"

ಜಗಳೂರು ಸೆ, 25– ಬೆಂಗಳೂರಿನಲ್ಲಿ ಸೆ.25ರಂದು ನಡೆದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಜಗಳೂರು ಪಟ್ಟಣ ಪಂಚಾಯಿತಿಯ ಪೌರಕಾರ್ಮಿಕರು, ಮುಖ್ಯಾಧಿಕಾರಿ ಹಾಗೂ ಸಿಬ್ಬಂದಿ ಬೆಂಗಳೂರಿಗೆ ತೆರಳಿದರು.

ಪಟ್ಟಣದ ಸ್ವಚ್ಛತೆ, ನೈರ್ಮಲ್ಯ ಹಾಗೂ ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಸೇವೆ ಮಹತ್ವದ್ದಾಗಿದೆ. ಪ್ರತಿದಿನ ಬೆಳಗ್ಗಿನಿಂದಲೇ ಪಟ್ಟಣದ ವಿವಿಧ ಬಡಾವಣೆಗಳು, ಪ್ರಮುಖ ರಸ್ತೆಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಕೊಳ್ಳುವ ಪೌರಕಾರ್ಮಿಕರನ್ನು ಗೌರವಿಸುವ ಉದ್ದೇಶದಿಂದ ರಾಜ್ಯಮಟ್ಟದ ಕಾರ್ಯಕ್ರಮ ಆಯೋಜಿಸಲಾಗಿದೆ.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಮಾತನಾಡಿ, ಪಟ್ಟಣಗಳನ್ನು ಸ್ವಚ್ಛವಾಗಿಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಒಂದೆಡೆ ಸೇರಿಸಿ



ಅವರ ಸೇವೆಯನ್ನು ಗೌರವಿಸುವ ಉದ್ದೇಶದಿಂದ ಬೆಂಗಳೂರಿನಲ್ಲಿ ಬೃಹತ್ ಕಾರ್ಯಕ್ರಮ ಆಯೋಜಿಸಲಾಗಿದೆ. ಜಗಳೂರು ಪಟ್ಟಣ ಪಂಚಾಯತಿಯ ಪೌರಕಾರ್ಮಿಕರೂ ಕಾರ್ಯಕ್ರಮದಲ್ಲಿ ಭಾಗವಹಿಸಿ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುತ್ತಿದ್ದಾರೆ ಎಂದು ಹೇಳಿದರು.

ಪೌರಕಾರ್ಮಿಕರು ಪ್ರತಿನಿತ್ಯ ಸಾರ್ವಜನಿಕರ ಆರೋಗ್ಯ ಮತ್ತು ಸ್ವಚ್ಛತೆಗಾಗಿ ತಮ್ಮ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಬಿಸಿಲು, ಮಳೆ ಎನ್ನದೆ ಕೆಲಸ ಮಾಡುವ ಅವರ ಸೇವೆಯನ್ನು ಗುರುತಿಸಿ ಗೌರವಿಸುವುದು ಸಮಾಜದ ಜವಾಬ್ದಾರಿಯಾಗಿದೆ. ಪೌರಕಾರ್ಮಿಕರ ಸಮಸ್ಯೆಗಳನ್ನು ಆಲಿಸುವುದು ಹಾಗೂ ಅವರೊಂದಿಗೆ ಆತ್ಮೀಯವಾಗಿ ಬೆರೆಯುವುದು ಇಂತಹ ಕಾರ್ಯಕ್ರಮಗಳ ಉದ್ದೇಶವಾಗಿದೆ ಎಂದರು.

ಆರೋಗ್ಯ ನಿರೀಕ್ಷಕ ಭರಮಪ್ಪ ಮಾತನಾಡಿ, ಜಗಳೂರು ಪಟ್ಟಣ ಪಂಚಾಯತಿಯ ಪೌರಕಾರ್ಮಿಕರು ಬೆಂಗಳೂರಿನಲ್ಲಿ ನಡೆಯುತ್ತಿರುವ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿರುವ ಹಿನ್ನೆಲೆಯಲ್ಲಿ ಒಂದು ದಿನದ ಮಟ್ಟಿಗೆ ಪಟ್ಟಣದ ಸ್ವಚ್ಛತಾ ಕಾರ್ಯಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು. ಮನೆ ಹಾಗೂ ಸುತ್ತಮುತ್ತಲಿನ ಕಸವನ್ನು ಎಲ್ಲೆಂದರಲ್ಲಿ ಹಾಕದೆ, ನಿಗದಿತ ಸ್ಥಳದಲ್ಲಿ ವಿಲೇವಾರಿ ಮಾಡುವ ಮೂಲಕ ಪಟ್ಟಣ ಪಂಚಾಯಿತಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಪೌರಕಾರ್ಮಿಕರು ಬೆಂಗಳೂರಿಗೆ ತೆರಳಿರುವ ಸಂದರ್ಭದಲ್ಲಿ ಸಾರ್ವಜನಿಕರು ಸ್ವಚ್ಛತೆಯ ಜವಾಬ್ದಾರಿಯನ್ನು ಅರಿತು–ಕೊಂಡು ಕಸವನ್ನು ರಸ್ತೆಗೆ ಹಾಕದೆ, ಮನೆಗಳಲ್ಲಿಯೇ ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕಿಸಿ ವಿಲೇವಾರಿ ಮಾಡಲು ಸಹಕರಿಸಬೇಕು. ಪೌರಕಾರ್ಮಿಕರ ಸೇವೆಗೆ ಗೌರವ ಸಲ್ಲಿಸುವ ಉತ್ತಮ ಮಾರ್ಗವೆಂದರೆ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದೇ ಆಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

ಉಚ್ಚಂಗಿದುರ್ಗದ ಶ್ರೀ ಉಚ್ಚಂಗೆಮ್ಮ ದೇವಿಗೆ ವಿಶೇಷ ಅಲಂಕಾರ



"ಮುಂಜಾನೆಯ ಮೆರಗು"

ಜಗಳೂರು ಸೆ, 25– ಜಗಳೂರು ವಿಧಾನಸಭಾ ಕ್ಷೇತ್ರದ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಉಚ್ಚಂಗಿದುರ್ಗದ ಶ್ರೀ ಉಚ್ಚಂಗೆಮ್ಮ ದೇವಾಲಯದಲ್ಲಿ ಶುಕ್ರವಾರ ವಿಶೇಷ ಪೂಜಾ ಕಾರ್ಯಕ್ರಮಗಳು ನೆರವೇರಿದವು.

ಈ ಹಿನ್ನೆಲೆಯಲ್ಲಿ ಶ್ರೀ ಉಚ್ಚಂಗೆಮ್ಮ ದೇವಿಗೆ ವಿವಿಧ ಬಗೆಯ ಹೂವುಗಳು ಹಾಗೂ ಆಭರಣಗಳಿಂದ ವಿಶೇಷ ಅಲಂಕಾರ ಮಾಡಲಾಗಿದ್ದು, ದೇವಿಯ ದರ್ಶನಕ್ಕೆ ಆಗಮಿಸಿದ ಭಕ್ತರ ಗಮನ ಸೆಳೆಯಿತು. ವಿಶೇಷ ಅಲಂಕಾರದಲ್ಲಿ ಕಂಗೊಳಿಸಿದ ದೇವಿಯ ದರ್ಶನ ಪಡೆದು ಭಕ್ತರು ಪೂಜೆ ಸಲ್ಲಿಸಿ, ತಮ್ಮ ಕುಟುಂಬದ ಒಳಿತಿಗಾಗಿ ಪ್ರಾರ್ಥಿಸಿದರು.

ಬೆಳಗ್ಗಿನಿಂದಲೇ ದೇವಾಲಯಕ್ಕೆ ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದುಕೊಂಡರು. ದೇವಸ್ಥಾನದ ಆವರಣದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು. ಅರ್ಚಕರು ವಿಶೇಷ ಪೂಜೆ, ಅಭಿಷೇಕ ಹಾಗೂ ಧಾರ್ಮಿಕ ವಿಧಿ–ವಿಧಾನಗಳನ್ನು ನೆರವೇರಿಸಿದರು.

ಒತ್ತಡದ ಜೀವನಶೈಲಿಯಿಂದ ಹೊರಬರಲು ಯೋಗ, ಧ್ಯಾನವೇ ಮದ್ದು: ದೇವರಾಜ್

"ಮುಂಜಾನೆಯ ಮೆರಗು"

ಜಗಳೂರು ಸೆ, 25– ಆಧುನಿಕ ಜೀವನಶೈಲಿಯಲ್ಲಿ ಹೆಚ್ಚುತ್ತಿರುವ ಮಾನಸಿಕ ಒತ್ತಡ, ಆತಂಕ ಹಾಗೂ ಒತ್ತಡದ ನಡುವೆಯೇ ಕೆಲಸ ನಿರ್ವಹಿಸುವ ಅನಿವಾರ್ಯತೆಯಿಂದ ಹೊರಬರಲು ಯೋಗ, ಧ್ಯಾನ ಹಾಗೂ ನಗು ಪ್ರಮುಖ ಸಾಧನಗಳಾಗಿವೆ ಎಂದು ಗೋವಾ ವಿಮಾನ ನಿಲ್ದಾಣದಲ್ಲಿ ಪ್ಯಾರಾಮಿಲಿಟರಿ ಎಎಸ್‌ಐ ಆಗಿ ಕಾರ್ಯನಿರ್ವಹಿಸುತ್ತಿರುವ ದೇವರಾಜ್ ಹೇಳಿದರು.

ಪಟ್ಟಣದ ಗ್ರಂಥಾಲಯದಲ್ಲಿ ಗ್ರಂಥಾಲಯದ ಸಿಬ್ಬಂದಿ ಹಾಗೂ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಸ್ಪರ್ಧಾಕಾಂಕ್ಷಿಗಳಿಗಾಗಿ ಹಮ್ಮಿಕೊಂಡಿದ್ದ ಒತ್ತಡ ನಿರ್ವಹಣೆ ಮತ್ತು ಜೀವನ ನಿರ್ವಹಣೆ ಕುರಿತ ವಿಶೇಷ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಇಂದಿನ ದಿನಮಾನಗಳಲ್ಲಿ ಜೀವನವೇ ಸ್ಪರ್ಧೆಯಾಗಿ ಮಾರ್ಪಟ್ಟಿದೆ. ಶಿಕ್ಷಣ, ಉದ್ಯೋಗ, ಪರೀಕ್ಷೆ ಹಾಗೂ ವೃತ್ತಿಜೀವನ ಸೇರಿದಂತೆ ಪ್ರತಿಯೊಂದು ಹಂತದಲ್ಲೂ ವ್ಯಕ್ತಿ ಒತ್ತಡವನ್ನು ಎದುರಿಸುತ್ತಿದ್ದಾನೆ.



ವಿಶೇಷವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುವ ಅಭ್ಯರ್ಥಿಗಳು ನಿರಂತರವಾಗಿ ಓದುವುದು, ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಬೇಕೆಂಬ ಒತ್ತಡ, ಉದ್ಯೋಗ ಪಡೆಯುವ ಆತಂಕ ಹಾಗೂ ಭವಿಷ್ಯದ ಬಗ್ಗೆ ಚಿಂತಿಸುವುದರಿಂದ ಮಾನಸಿಕ ಒತ್ತಡಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಿದೆ ಎಂದರು.

ಪರೀಕ್ಷೆಗೆ ಓದುವುದು ಎಷ್ಟು ಮುಖ್ಯವೋ, ಪರೀಕ್ಷೆಯನ್ನು ಎದುರಿಸುವ ಮಾನಸಿಕ ಸಿದ್ಧತೆಯೂ ಅಷ್ಟೇ ಮುಖ್ಯ. ಯಾವುದೇ ಪರೀಕ್ಷೆಯನ್ನು ಎದುರಿಸುವಾಗ ಭಯ ಹಾಗೂ ಆತಂಕಕ್ಕೆ ಒಳಗಾಗದೆ ಆತ್ಮವಿಶ್ವಾಸದಿಂದ ಮುಂದುವರಿಯಬೇಕು. ಪರೀಕ್ಷೆಯ ಫಲಿತಾಂಶದ ಬಗ್ಗೆ ನಿರಂತರವಾಗಿ ಚಿಂತಿಸುವ ಬದಲು ತಮ್ಮ ಕೈಯಲ್ಲಿರುವ ಸಿದ್ಧತೆಯ ಮೇಲೆ ಗಮನ ಕೇಂದ್ರೀಕರಿಸಬೇಕು ಎಂದು ಸಲಹೆ ನೀಡಿದರು.

ಏಕಾಗ್ರತೆ ಹೆಚ್ಚಿಸಿಕೊಳ್ಳಿ

ಸ್ಪರ್ಧಾಕಾಂಕ್ಷಿಗಳು ದಿನದ ಸಮಯವನ್ನು ಸಮರ್ಪಕವಾಗಿ ವಿಭಾಗಿಸಿಕೊಂಡು ಅಧ್ಯಯನ ಮಾಡಬೇಕು. ನಿರಂತರವಾಗಿ ಹಲವು ಗಂಟೆಗಳ ಕಾಲ ಪುಸ್ತಕ ಓದುವುದಕ್ಕಿಂತ ಮಧ್ಯೆ ಸಣ್ಣ ವಿರಾಮಗಳನ್ನು ತೆಗೆದುಕೊಂಡು ಓದುವುದರಿಂದ ಏಕಾಗ್ರತೆ ಹೆಚ್ಚಿಸಿಕೊಳ್ಳಬಹುದು. ನಿದ್ರೆ, ಆಹಾರ ಹಾಗೂ ದೈಹಿಕ ಚಟುವಟಿಕೆಗಳಿಗೂ ಸಮಯ ನೀಡಬೇಕು ಎಂದು ತಿಳಿಸಿದರು.

ಯೋಗ ಮತ್ತು ಧ್ಯಾನದಿಂದ ಮನಸ್ಸನ್ನು ಶಾಂತವಾಗಿಟ್ಟುಕೊಳ್ಳುವುದರ ಜೊತೆಗೆ ಏಕಾಗ್ರತೆಯನ್ನು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ಪ್ರತಿದಿನ ಕೆಲ ಸಮಯ ಧ್ಯಾನಕ್ಕೆ ಮೀಸಲಿಡುವುದರಿಂದ ಪರೀಕ್ಷೆಯ ಸಂದರ್ಭದಲ್ಲಿ ಉಂಟಾಗುವ ಆತಂಕವನ್ನು ನಿಯಂತ್ರಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದರು.

ಮೂರು ಗಂಟೆಗಳ ಕಾಲ ವಿಭಿನ್ನ ಚಟುವಟಿಕೆ

ಕಾರ್ಯಾಗಾರದಲ್ಲಿ ಸುಮಾರು ಮೂರು ಗಂಟೆಗಳ ಕಾಲ ಸ್ಪರ್ಧಾಕಾಂಕ್ಷಿಗಳು ಹಾಗೂ ಸಿಬ್ಬಂದಿಗೆ ಪ್ರಾಯೋಗಿಕವಾಗಿ ವಿವಿಧ ಚಟುವಟಿಕೆಗಳನ್ನು ನಡೆಸಲಾಯಿತು. ಯೋಗಾಭ್ಯಾಸ, ಧ್ಯಾನ,



ಹಾಸ್ಯ, ಹಾಡು ಹಾಗೂ ಮನಸ್ಸನ್ನು ಹಗುರಗೊಳಿಸುವ ಹಲವು ಚಟುವಟಿಕೆಗಳ ಮೂಲಕ ಒತ್ತಡವನ್ನು ಹೇಗೆ ಕಡಿಮೆ ಮಾಡಿಕೊಳ್ಳಬಹುದು ಎಂಬುದನ್ನು ತಿಳಿಸಿಕೊಡಲಾಯಿತು.

ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಅಭ್ಯರ್ಥಿಗಳು ತಮ್ಮ ದಿನನಿತ್ಯದ ಜೀವನದಲ್ಲಿ ಎದುರಿಸುತ್ತಿರುವ ಒತ್ತಡ, ಪರೀಕ್ಷಾ ಸಿದ್ಧತೆಯಲ್ಲಿನ ಆತಂಕ ಹಾಗೂ ಏಕಾಗ್ರತೆಯ ಕೊರತೆ ಸೇರಿದಂತೆ ಹಲವು ವಿಚಾರಗಳ ಕುರಿತು ಚರ್ಚಿಸಿದರು. ಇದಕ್ಕೆ ಸರಳವಾದ ದೈನಂದಿನ ಅಭ್ಯಾಸಗಳ ಮೂಲಕ ಪರಿಹಾರ ಕಂಡುಕೊಳ್ಳುವ ವಿಧಾನಗಳನ್ನು ದೇವರಾಜ್ ವಿವರಿಸಿದರು.

ಕಾರ್ಯಕ್ರಮದಲ್ಲಿ ಗ್ರಂಥಾಲಯದ ಸಿಬ್ಬಂದಿ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಅಭ್ಯರ್ಥಿಗಳು ಸೇರಿದಂತೆ ಹಲವರು ಭಾಗವಹಿಸಿದ್ದರು.

ಕಲ್ಲೇದೇವರಪುರದಲ್ಲಿ ಉಲ್ಬಣಿಸಿದ ಕುಡಿಯುವ ನೀರಿನ ಸಮಸ್ಯೆ

ಎಂಟು ಬೋರ್‌ವೆಲ್‌ಗಳು ಬತ್ತಿ ಬರಿದು; ಹತ್ತು ದಿನಗಳಿಂದ ಟ್ಯಾಂಕರ್ ಮೂಲಕ ನೀರು ಪೂರೈಕೆ

"ಮುಂಜಾನೆಯ ಮೆರಗು"

ಜಗಳೂರು ಸೆ, 25– ಮುಂಗಾರು ಮಳೆ ಕೈಕೊಟ್ಟ ಪರಿಣಾಮ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಅಂತರ್ಜಲ ಮಟ್ಟ ಕುಸಿಯುತ್ತಿದ್ದು, ಕುಡಿಯುವ ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ. ತಾಲೂಕಿನ ಕಲ್ಲೇದೇವರಪುರ ಗ್ರಾಮದಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದ್ದು, ಗ್ರಾಮ ಪಂಚಾಯಿತಿ ವತಿಯಿಂದ ಕಳೆದ ಹತ್ತು ದಿನಗಳಿಂದ ಟ್ಯಾಂಕರ್ ಮೂಲಕ ಗ್ರಾಮಸ್ಥರಿಗೆ ನೀರು ಸರಬರಾಜು ಮಾಡಲಾಗುತ್ತಿದೆ.

ಕಲ್ಲೇದೇವರಪುರ ಗ್ರಾಮದಲ್ಲಿ ಕುಡಿಯುವ ನೀರು ಪೂರೈಕೆಗೆ ಪ್ರಮುಖವಾಗಿ ಅವಲಂಬಿಸಿರುವ ಸುಮಾರು ಎಂಟು ಬೋರ್‌ವೆಲ್‌ಗಳಿದ್ದು, ಅಂತರ್ಜಲ ಮಟ್ಟ ಗಣನೀಯವಾಗಿ ಕುಸಿದ ಪರಿಣಾಮ ಎಲ್ಲ ಬೋರ್‌ವೆಲ್‌ಗಳಲ್ಲಿಯೂ ನೀರು ಖಾಲಿಯಾಗಿದೆ. ಇದರಿಂದ ಗ್ರಾಮದಲ್ಲಿ ಕುಡಿಯುವ ನೀರಿನ ಅಭಾವ ಎದುರಾಗಿದ್ದು, ಜನರು ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಟ್ಯಾಂಕರ್ ನೀರೇ ಆಸರೆ

ಬೋರ್‌ವೆಲ್‌ಗಳಲ್ಲಿ ನೀರು ಲಭ್ಯವಾಗದ



ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ತುರ್ತು ಕ್ರಮ ಕೈಗೊಂಡು ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುವ ವ್ಯವಸ್ಥೆ ಕಲ್ಪಿಸಿದೆ. ಕಳೆದ ಹತ್ತು ದಿನಗಳಿಂದ ಟ್ಯಾಂಕರ್ ಮೂಲಕ ಗ್ರಾಮಕ್ಕೆ ನೀರು ತಂದು ವಿವಿಧ ಪ್ರದೇಶಗಳಿಗೆ ಸರಬರಾಜು ಮಾಡಲಾಗುತ್ತಿದೆ.

ಪ್ರತಿದಿನದ ಅಗತ್ಯಕ್ಕೆ ತಕ್ಕಷ್ಟು ನೀರು ಲಭ್ಯವಾಗದಿರುವುದರಿಂದ ಗ್ರಾಮಸ್ಥರು ನೀರನ್ನು ಸಂಗ್ರಹಿಸಿಟ್ಟುಕೊಂಡು ಬಳಕೆ ಮಾಡುವಂತಾಗಿದೆ. ಕುಡಿಯಲು, ಅಡುಗೆ ಮಾಡಲು ಹಾಗೂ ಜಾನುವಾರುಗಳ ಬಳಕೆಗೆ ನೀರು ಹೊಂದಿಸಿಕೊಳ್ಳುವುದು ಗ್ರಾಮಸ್ಥರಿಗೆ ಸವಾಲಾಗಿ ಪರಿಣಮಿಸಿದೆ.

ಕೆರೆ ಇದ್ದರೂ ಬಗೆಹರಿಯದ ಸಮಸ್ಯೆ

ಗ್ರಾಮದ ಸಮೀಪ ಸಂಗೇನಹಳ್ಳಿ ಕೆರೆ ಇದ್ದರೂ, ಸುತ್ತಮುತ್ತಲಿನ ಅಂತರ್ಜಲ ಮಟ್ಟ ಕುಸಿದಿರುವುದರಿಂದ ಅದರ ಪ್ರಯೋಜನ ನೇರವಾಗಿ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಆಗುತ್ತಿಲ್ಲ. ಮಳೆ ಕೊರತೆಯಿಂದಾಗಿ ಕೆರೆ ಸೇರಿದಂತೆ ಜಲಮೂಲಗಳ ಮೇಲೆ ಒತ್ತಡ ಹೆಚ್ಚಾಗಿದ್ದು, ಬೋರ್‌ವೆಲ್‌ಗಳಲ್ಲಿಯೂ ನೀರಿನ ಪ್ರಮಾಣ ತೀವ್ರವಾಗಿ ಕು